ಸಂಪುಟ: 11 ಸಂಚಿಕೆ: 195 ಪುಟ: 4+2 ಬೆಲೆ : 3.00 ಮಂಗಳವಾರ, ಸೆಪ್ಟೆಂಬರ್ 08, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 195 Pages : 4+2 Rate : 3.00 Tuesday, September 08, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22

ವಿಜಯ ಸಾಕ್ಷಿ ದಿನಪತ್ರಿಕೆ ಈಗ ಆನ್ ಲೈನ್ ನಲ್ಲಿಯೂ ಲಭ್ಯ. ನಿಮ್ಮ ನೆಚ್ಚಿನ ಪತ್ರಿಕೆಯನ್ನು ಓದಲು www.epaper.Vijayasakshi.com ಜಾಲತಾಣಕ್ಕೆ ಭೇಟಿ ನೀಡಿ. ಕ್ಷಣ ಕ್ಷಣದ ಸುದ್ದಿಗಳಿಗಾಗಿ www.Vijayasakshi.com ವೀಕ್ಷಿಸಿ.

## ಗದಗ-ಬೆಟಗೇರಿಯಲ್ಲಿ ಕಸ ಸಂಗ್ರಹ ಬಂದ್; ನ್ಯಾಯಕ್ಕಾಗಿ ೧೩೩ ಮಹಿಳಾ ಪೌರಕಾರ್ಮಿಕರ ಧರಣಿ

# 20 ವರ್ಷ ದುಡಿದರೂ ಖಾಯಂ ನೌಕರರಲ್ಲ!

**ವಿಜಯಸಾಕ್ಷಿ ಸುದ್ದಿ, ಗದಗ**

ಎರಡು ದಶಕಗಳಿಂದ ಮನೆ-ಮನೆಗೆ ತೆರಳಿ ತ್ಯಾಜ್ಯ ಸಂಗ್ರಹಿಸುವ ಮೂಲಕ ಗದಗ-ಬೆಟಗೇರಿ ಅವಳಿ ನಗರದ ಸ್ವಚ್ಛತೆ ಕಾಪಾಡುತ್ತಿರುವ 133 ದಲಿತ ಮಹಿಳಾ ಪೌರಕಾರ್ಮಿಕರು, ಸರ್ಕಾರ ನಿಗದಿಪಡಿಸಿರುವ ಕನಿಷ್ಠ ವೇತನ ಅಥವಾ ನೇರ ನೇಮಕಾತಿ ನೀಡುವಂತೆ ಆಗ್ರಹಿಸಿ ನಗರಸಭೆ ಮುಂದೆ ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹ ಆರಂಭಿಸಿದ್ದಾರೆ.

ನಗರಸಭೆ ಸದಸ್ಯ ಕೃಷ್ಣಾ ಪರಾಪೂರ ನೇತೃತ್ವದಲ್ಲಿ ನಡೆಯುತ್ತಿರುವ ಧರಣಿಯಲ್ಲಿ, ಬೇಡಿಕೆ ಈಡೇರುವವರೆಗೆ ಮನೆ-ಮನೆ ಕಸ ಸಂಗ್ರಹ ಹಾಗೂ ಸ್ವಚ್ಛತಾ ಕಾರ್ಯ ಸ್ಥಗಿತಗೊಳಿಸುವುದಾಗಿ ಕಾರ್ಮಿಕರು ಎಚ್ಚರಿಸಿದ್ದಾರೆ. ಇದರಿಂದ ಅವಳಿ ನಗರದಲ್ಲಿ ಕಸದ ಸಮಸ್ಯೆ ಮತ್ತಷ್ಟು ಉಲ್ಬಣಗೊಳ್ಳುವ ಆತಂಕ ಎದುರಾಗಿದೆ.

2005-06ರಿಂದ ನಗರಸಭೆ ವ್ಯಾಪ್ತಿಯ ಮನೆಗಳು ಹಾಗೂ ವಾಣಿಜ್ಯ ಮಳಿಗೆಗಳಿಂದ ತ್ಯಾಜ್ಯ ಸಂಗ್ರಹಿಸುವ ಕೆಲಸ ಮಾಡುತ್ತಿರುವ ಈ ಮಹಿಳಾ ಕಾರ್ಮಿಕರಿಗೆ ಆರಂಭದಲ್ಲಿ




ಮನೆಗಳಿಂದ ಸಂಗ್ರಹಿಸುವ ವಂತಿಕೆಯ ಆಧಾರದಲ್ಲಿ ಪಾವತಿ ಮಾಡಲಾಗುತ್ತಿತ್ತು. ವಂತಿಕೆ ಸಂಗ್ರಹದಲ್ಲಿ ಎದುರಾದ ಸಮಸ್ಯೆಗಳ ಹಿನ್ನೆಲೆಯಲ್ಲಿ 2014ರಲ್ಲಿ ನಗರಸಭೆ ಟೆಂಡರ್ ಮೂಲಕ 133 ಕಾರ್ಮಿಕರನ್ನು ನೇಮಿಸಿಕೊಂಡು ತಿಂಗಳಿಗೆ 3 ಸಾವಿರ ಗೌರವಧನ ನಿಗದಿಪಡಿಸಿತ್ತು. 2017ರಲ್ಲಿ ಅದು 5 ಸಾವಿರಕ್ಕೆ ಏರಿಕೆಯಾಗಿದ್ದು, 2022ರಿಂದ 6,500 ನೀಡಲಾಗುತ್ತಿದೆ ಎಂದು ಕಾರ್ಮಿಕರು ತಿಳಿಸಿದ್ದಾರೆ.

ನಗರಸಭೆಯಲ್ಲಿ ಇತ್ತೀಚೆಗೆ ನೇಮಕಗೊಂಡ ಲೋಡರ್‌ಗಳು, ಚಾಲಕರು ಹಾಗೂ ಮೊಬಿಲೈಸರ್‌ಗಳಿಗೆ ಸರ್ಕಾರ ನಿಗದಿಪಡಿಸಿರುವ ಕನಿಷ್ಠ ವೇತನ ನೀಡಲಾಗುತ್ತಿದೆ. ಆದರೆ 20 ವರ್ಷಗಳಿಂದ ನಿರಂತರವಾಗಿ ಸೇವೆ ಸಲ್ಲಿಸುತ್ತಿರುವ ತಮ್ಮನ್ನು ಮಾತ್ರ ಕನಿಷ್ಠ ವೇತನದಿಂದ ವಂಚಿಸಲಾಗುತ್ತಿದೆ ಎಂದು ಮಹಿಳಾ ಕಾರ್ಮಿಕರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

> ನಗರದ ಸ್ವಚ್ಛತೆ ಕಾಪಾಡುವಲ್ಲಿ ಮಹಿಳಾ ಪೌರಕಾರ್ಮಿಕರ ಪಾತ್ರ ಮಹತ್ವದ್ದಾಗಿದೆ. 20 ವರ್ಷಗಳಿಂದ ನಿರಂತರವಾಗಿ ಕೆಲಸ ಮಾಡುತ್ತಿರುವ ಅವರಿಗೆ ಕನಿಷ್ಠ ವೇತನ ನೀಡದೆ ಕಡಿಮೆ ಗೌರವಧನದಲ್ಲಿ ದುಡಿಸಿಕೊಳ್ಳುವುದು ನ್ಯಾಯಸಮ್ಮತವಲ್ಲ. ಕೊರೋನಾ ಸಂದರ್ಭದಲ್ಲೂ ಜೀವದ ಹಂಗು ತೊರೆದು ಸೇವೆ ಸಲ್ಲಿಸಿದ ಈ ಕಾರ್ಮಿಕರಿಗೆ ಸರ್ಕಾರದ ನಿಯಮದಂತೆ ವೇತನ ಅಥವಾ ನೇರ ನೇಮಕಾತಿ ಕಲ್ಪಿಸಬೇಕು. ಜಿಲ್ಲಾಡಳಿತ ಕೂಡಲೇ ಮಧ್ಯಪ್ರವೇಶಿಸಿ ನ್ಯಾಯ ಒದಗಿಸಬೇಕು.
>
> \- ಕೃಷ್ಣಾ ಪರಾಪೂರ, ನಗರಸಭೆ ಸದಸ್ಯ

ಕೊರೋನಾ ಸಂಕಷ್ಟದ ಸಂದರ್ಭದಲ್ಲೂ ಜೀವದ ಹಂಗು ತೊರೆದು ಕರ್ತವ್ಯ ನಿರ್ವಹಿಸಿದ್ದೇವೆ. ಬೆಲೆ ಏರಿಕೆಯ ನಡುವೆ 6,500 ಗೌರವಧನದಲ್ಲಿ ಕುಟುಂಬ ನಿರ್ವಹಿಸುವುದು ಕಷ್ಟವಾಗಿದೆ. ನಮ್ಮ ಸೇವೆಯನ್ನು ಪರಿಗಣಿಸಿ ಕನಿಷ್ಠ ವೇತನ ಜಾರಿಗೊಳಿಸಬೇಕು; ಸಾಧ್ಯವಾಗದಿದ್ದರೆ ನಗರಸಭೆಯಿಂದ ನೇರವಾಗಿ ವೇತನ ಪಾವತಿಸುವ ವ್ಯವಸ್ಥೆ ಮಾಡಬೇಕು ಎಂದು ಅವರು ಒತ್ತಾಯಿಸಿದ್ದಾರೆ.

ಇದೇ ವೇಳೆ ಪೌರಕಾರ್ಮಿಕರ ನೇರ ನೇಮಕಾತಿ ವಿಚಾರದಲ್ಲಿಯೂ ಜಿಲ್ಲಾಡಳಿತ ಕ್ರಮ ಕೈಗೊಳ್ಳಬೇಕು ಎಂದು ಹೋರಾಟಗಾರರು ಆಗ್ರಹಿಸಿದ್ದಾರೆ. ಬೇಡಿಕೆಗಳ ಕುರಿತು ಸ್ಪಷ್ಟ ಭರವಸೆ ದೊರೆಯದಿದ್ದರೆ ಹೋರಾಟ ತೀವ್ರಗೊಳಿಸಿ ಕುಟುಂಬ ಸಮೇತ ಧರಣಿ ನಡೆಸುವುದಾಗಿ ಎಚ್ಚರಿಸಿದ್ದಾರೆ. ಉಸ್ತುವಾರಿ ಸಚಿವ ಬಸವರಾಜ ರಾಯರೆಡ್ಡಿ ಹಾಗೂ ಶಾಸಕ ಡಾ. ಹೆಚ್.ಕೆ. ಪಾಟೀಲ ಮಧ್ಯಪ್ರವೇಶಿಸಿ ಸಮಸ್ಯೆ ಬಗೆಹರಿಸಬೇಕು ಎಂದು ಒತ್ತಾಯಿಸಿದ್ದಾರೆ.

## ರಾಹುಲ್ ಗಾಂಧಿ ವಿರುದ್ಧದ ಎಫ್‌ಐಆರ್ ಖಂಡಿಸಿ ಇಂದು ಕಾಂಗ್ರೆಸ್ ಪ್ರತಿಭಟನೆ

**ವಿಜಯಸಾಕ್ಷಿ ಸುದ್ದಿ, ಗದಗ**

ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ವಿರುದ್ಧ ದಾಖಲಿಸಿರುವ ದುರುದ್ದೇಶಪೂರಿತ ಎಫ್‌ಐಆರ್ ಖಂಡಿಸಿ ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ವತಿಯಿಂದ ಸೆ.8ರಂದು ಬೆಳಗ್ಗೆ 10 ಗಂಟೆಗೆ ನಗರದ ಟಿಪ್ಪು ಸರ್ಕಲ್‌ನಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ಪ್ರತಿಭಟನಾ ಮೆರವಣಿಗೆ ಹಮ್ಮಿಕೊಳ್ಳಲಾಗಿದೆ. ಹಲ್ದ್ವಾನಿಯಲ್ಲಿ ನಡೆದ ಜಾತಿವಾದಿ ಘಟನೆಗೆ ಸಂಬಂಧಿಸಿದಂತೆ ಅಪರಾಧಿಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ರಾಹುಲ್ ಗಾಂಧಿ ಒತ್ತಾಯಿಸಿದ್ದರು. ಆದರೆ, ಉತ್ತರಾಖಂಡ ಪೊಲೀಸರು ಅವರ ವಿರುದ್ಧವೇ ಎಫ್‌ಐಆರ್ ದಾಖಲಿಸಿರುವುದು ಸೇಡಿನ ರಾಜಕಾರಣವಾಗಿದೆ ಎಂದು ಕಾಂಗ್ರೆಸ್ ಆರೋಪಿಸಿದೆ. ತಪ್ಪಿತಸ್ಥ ಬಿಜೆಪಿ ಕಾರ್ಯಕರ್ತರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ಪ್ರತಿಭಟನೆ ನಡೆಸಲಾಗುತ್ತಿದೆ.

ಮಾಜಿ ಸಚಿವ ಹಾಗೂ ಶಾಸಕ ಎಚ್.ಕೆ. ಪಾಟೀಲ, ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ, ಮಾಜಿ ಶಾಸಕರಾದ ಬಿ.ಆರ್. ಯಾವಗಲ್, ಜಿ.ಎಸ್. ಗಡ್ಡದೇವರಮಠ, ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ ಸೇರಿದಂತೆ ಪಕ್ಷದ ಮುಖಂಡರು ಪಾಲ್ಗೊಳ್ಳಲಿದ್ದಾರೆ.

ಮಾಜಿ ಶಾಸಕರು, ಜಿಲ್ಲಾ ಹಾಗೂ ಬ್ಲಾಕ್ ಕಾಂಗ್ರೆಸ್ ಪದಾಧಿಕಾರಿಗಳು, ವಿವಿಧ ಮುಂಚೂಣಿ ಘಟಕಗಳ ಅಧ್ಯಕ್ಷರು-ಪದಾಧಿಕಾರಿಗಳು, ಸ್ಥಳೀಯ ಸಂಸ್ಥೆಗಳ ಪ್ರತಿನಿಧಿಗಳು ಹಾಗೂ ಪಕ್ಷದ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಗದಗ-ಬೆಟಗೇರಿ ಶಹರ ಕಾಂಗ್ರೆಸ್ ಅಧ್ಯಕ್ಷ ಬಿ.ಬಿ. ಅಸೂಟಿ, ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಗೌಡ ಎಚ್. ಪಾಟೀಲ ಹಾಗೂ ಜಿಲ್ಲಾ ಪ್ರಚಾರ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ಮನವಿ ಮಾಡಿದ್ದಾರೆ.

## ಮುಂಡರಗಿ, ಡಂಬಳ, ಶಿಂಗಟಾಲೂರು ಭಾಗದಲ್ಲಿ ನಾಳೆ ವಿದ್ಯುತ್ ವ್ಯತ್ಯಯ

**ವಿಜಯಸಾಕ್ಷಿ ಸುದ್ದಿ, ಗದಗ**

110 ಕೆವ್ಹಿ ಮುಂಡರಗಿ, ಡಂಬಳ ಹಾಗೂ ಶಿಂಗಟಾಲೂರು ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಕೈಗೊಳ್ಳಲಾಗುತ್ತಿರುವ ಹಿನ್ನೆಲೆಯಲ್ಲಿ ಸೆ.9ರಂದು ಬೆಳಗ್ಗೆ 10ರಿಂದ ಸಂಜೆ 6ರವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ ಎಂದು ಹೆಸ್ಕಾಂನ ಕಾರ್ಯ ಮತ್ತು ಪಾಲನೆ ವಿಭಾಗ, ಗದಗ ಪ್ರಕಟಣೆಯಲ್ಲಿ ತಿಳಿಸಿದೆ.

ಡಂಬಳ ವಿದ್ಯುತ್ ಉಪಕೇಂದ್ರದಿಂದ ಹೊರಹೋಗುವ ಎಲ್ಲ 11 ಕೆವ್ಹಿ ಮಾರ್ಗಗಳು, 33 ಕೆವ್ಹಿ ವಾಟರ್ ಸಪ್ಲೈ ಮಾರ್ಗ ಹಾಗೂ 33 ಕೆವ್ಹಿ ಲಕ್ಕುಂಡಿ ವಿದ್ಯುತ್ ಉಪಕೇಂದ್ರದಿಂದ ಹೊರಹೋಗುವ ಎಲ್ಲ 11 ಕೆವ್ಹಿ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಅಲ್ಲದೆ 110 ಕೆವ್ಹಿ ಐಪಿಪಿ ಮೆ. ಸುಜಲಾನ್ ಲಿ., ಹಾರೋಗೇರಿ, ಮೆ. ಎನರ್‌ಕಾನ್ ಲಿ., ಮೆ. ಅಕಿಲಾಗ್ಯಾ ಸೋಲಾರ್ ಹಾಗೂ ಮೆ. ಚುರ್ಚಿಹಾಳ ನೀರಾವರಿ ಮಾರ್ಗಗಳಿಗೂ ವ್ಯತ್ಯಯ ಉಂಟಾಗಲಿದೆ.

ಮುಂಡರಗಿ ವಿದ್ಯುತ್ ಉಪಕೇಂದ್ರ ವ್ಯಾಪ್ತಿಯಲ್ಲಿ 110 ಕೆವ್ಹಿ ಐಪಿಪಿ ಮೆ. ವಿಜಯನಗರ ಶುಗರ್ಸ್ ಲಿ., ಮೆ. ಬೀಡನಾಳ, ನೀರಾವರಿ, ಶಿಂಗಟಾಲೂರು ಹಾಗೂ ಉಪ್ಪಿನ ಬೇಟಗೇರಿ ಮಾರ್ಗಗಳು ಸೇರಿದಂತೆ ಉಪಕೇಂದ್ರದಿಂದ ಹೊರಹೋಗುವ ಎಲ್ಲ 11 ಕೆವ್ಹಿ ಮತ್ತು 33 ಕೆವ್ಹಿ ಮಾರ್ಗಗಳಲ್ಲಿ ವಿದ್ಯುತ್ ಪೂರೈಕೆ ಸ್ಥಗಿತಗೊಳ್ಳಲಿದೆ.

ಶಿಂಗಟಾಲೂರು ವಿದ್ಯುತ್ ಉಪಕೇಂದ್ರದಿಂದ ಹೊರಹೋಗುವ ಎಲ್ಲ 11 ಕೆವ್ಹಿ ಮಾರ್ಗಗಳಲ್ಲಿಯೂ ಇದೇ ಅವಧಿಯಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಮುಂಡರಗಿ, ಡಂಬಳ ಹಾಗೂ ಶಿಂಗಟಾಲೂರು ವಿದ್ಯುತ್ ವಿತರಣಾ ಕೇಂದ್ರಗಳಿಂದ ಪೂರೈಕೆಯಾಗುವ ನಗರ ಮತ್ತು ಗ್ರಾಮೀಣ ಪ್ರದೇಶಗಳ ಎಲ್ಲ 11 ಕೆವ್ಹಿ ವಿತರಣಾ ಮಾರ್ಗಗಳಿಗೂ ವಿದ್ಯುತ್ ವ್ಯತ್ಯಯದ ಪರಿಣಾಮ ಇರಲಿದೆ. ಸಾರ್ವಜನಿಕರು ಈ ಪ್ರಕಟಣೆಯನ್ನು ಗಮನಿಸಿ ಹೆಸ್ಕಾಂನೊಂದಿಗೆ ಸಹಕರಿಸುವಂತೆ ಕಾರ್ಯನಿರ್ವಾಹಕ ಇಂಜಿನಿಯರ್ (ವಿ), ಕಾರ್ಯ ಮತ್ತು ಪಾಲನೆ ವಿಭಾಗ, ಹುವಿಸಕಂನಿ., ಗದಗ ಅವರು ಮನವಿ ಮಾಡಿದ್ದಾರೆ.

### ಪಿಯುಸಿ ಶಿಕ್ಷಣ ವ್ಯವಸ್ಥೆ ಬಲಪಡಿಸಿ; ಗದಗ ಫಲಿತಾಂಶ ಹೆಚ್ಚಿಸಲು ಸ್ಪೀಕರ್ ಜಿ.ಎಸ್. ಪಾಟೀಲ ಕರೆ

## ಉಪನ್ಯಾಸಕರ ಸಮಸ್ಯೆ ಬಗೆಹರಿಸಲು ಸರ್ಕಾರ ಬದ್ಧ

**ವಿಜಯಸಾಕ್ಷಿ ಸುದ್ದಿ, ಗದಗ**

ಶಿಕ್ಷಣ ಕ್ಷೇತ್ರದಲ್ಲಿ ಗಮನಾರ್ಹ ಬದಲಾವಣೆಗಳನ್ನು ತರಲು ಸರ್ಕಾರ ಉದ್ದೇಶಿಸಿದ್ದು, ಉಪನ್ಯಾಸಕರ ಸಮಸ್ಯೆಗಳಿಗೆ ಸ್ಪಂದಿಸಿ ಶೀಘ್ರದಲ್ಲಿ ಪರಿಹಾರ ಒದಗಿಸಲಾಗುವುದು ಎಂದು ವಿಧಾನಸಭೆ ಸಭಾಧ್ಯಕ್ಷ ಜಿ.ಎಸ್. ಪಾಟೀಲ ಹೇಳಿದರು.

ನಗರದ ತೋಂಟದಾರ್ಯ ಕಲ್ಯಾಣ ಮಂಟಪದಲ್ಲಿ ಗದಗ ಜಿಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರ ಸಂಘ, ಕರ್ನಾಟಕ ರಾಜ್ಯ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಸಂಘದ ಜಿಲ್ಲಾ ಘಟಕ ಹಾಗೂ ಕರ್ನಾಟಕ ರಾಜ್ಯ ಪದವಿ ಪೂರ್ವ ಮಹಾವಿದ್ಯಾಲಯಗಳ ನೌಕರರ ಸಂಘದ ಜಿಲ್ಲಾ ಘಟಕದ ಆಶ್ರಯದಲ್ಲಿ ನಡೆದ ಶೈಕ್ಷಣಿಕ ಸಮ್ಮೇಳನ, ಪ್ರತಿಭಾ ಪುರಸ್ಕಾರ, ಪದಗ್ರಹಣ ಹಾಗೂ ಧನ್ಯತಾ ಸಮರ್ಪಣಾ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಪದವಿ ಪೂರ್ವ ಶಿಕ್ಷಣ ವ್ಯವಸ್ಥೆಯಲ್ಲಿ ಹಲವು ಗಮನಾರ್ಹ ಬದಲಾವಣೆಗಳಾಗುತ್ತಿವೆ. ಈ ಬದಲಾವಣೆಗಳಿಗೆ ಉಪನ್ಯಾಸಕರು ಸ್ಪಂದಿಸಿ, ವಿದ್ಯಾರ್ಥಿಗಳ ಶ್ರೇಯೋಭಿವೃದ್ಧಿಗಾಗಿ ನಿರಂತರವಾಗಿ ಕಾರ್ಯನಿರ್ವಹಿಸಬೇಕು. ಗದಗ ಜಿಲ್ಲೆಯ ದ್ವಿತೀಯ ಪಿಯುಸಿ ಫಲಿತಾಂಶವನ್ನು ಉತ್ತಮಪಡಿಸುವುದರೊಂದಿಗೆ ವಿದ್ಯಾರ್ಥಿ ಗಳಿಗೆ ಗುಣಾತ್ಮಕ ಶಿಕ್ಷಣ ನೀಡಬೇಕು ಎಂದು ಜಿ.ಎಸ್. ಪಾಟೀಲ ಕರೆ ನೀಡಿದರು.

**ನವೆಂಬರ್‌ನಲ್ಲಿ ಅನುದಾನಿತ ಶಾಲಾ-ಕಾಲೇಜು ಬಂದ್:** ಹೊರಟ್ಟಿ ವಿಧಾನಪರಿಷತ್ತಿನ ಮಾಜಿ ಸಭಾಪತಿ ಬಸವರಾಜ ಹೊರಟ್ಟಿ ಮಾತನಾಡಿ, ಶಿಕ್ಷಕರು ಹಾಗೂ ಉಪನ್ಯಾಸಕರ ಸಮಸ್ಯೆಗಳನ್ನು ಬಗೆಹರಿಸುವಂತೆ ಸರ್ಕಾರಕ್ಕೆ ಹಲವು ಬಾರಿ ಮನವಿ ಮಾಡಿದರೂ ಸ್ಪಂದನೆ ದೊರೆತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಹಳೆಯ ಪಿಂಚಣಿ ಯೋಜನೆ ಜಾರಿ, ಅನುದಾನಿತ ಶಾಲಾ-ಕಾಲೇಜುಗಳಲ್ಲಿ ಶಿಕ್ಷಕರು ಹಾಗೂ ಉಪನ್ಯಾಸಕರ ನೇಮಕಾತಿ, ಉಪನ್ಯಾಸಕ-ವಿದ್ಯಾರ್ಥಿ ಅನುಪಾತ ಸೇರಿದಂತೆ ಶಿಕ್ಷಣ ಕ್ಷೇತ್ರದ ಹಲವು ಗಂಭೀರ ಸಮಸ್ಯೆಗಳನ್ನು




### ಸಾಧಕರಿಗೆ ಸನ್ಮಾನ; ಸಂಗೀತ ಸಂಭ್ರಮ

ಸಮಾರಂಭದಲ್ಲಿ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಗದಗ ಜಿಲ್ಲೆಗೆ ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳು, ನಿವೃತ್ತ ಪ್ರಾಚಾರ್ಯರು ಹಾಗೂ ಉಪನ್ಯಾಸಕರು, ಶೇ.100 ಫಲಿತಾಂಶ ನೀಡಿದ ವಿವಿಧ ವಿಷಯಗಳ ಉಪನ್ಯಾಸಕರು, ಪ್ರಾಚಾರ್ಯ ಹುದ್ದೆಗೆ ಬಡ್ತಿ ಹೊಂದಿದವರು ಹಾಗೂ ಸಾಧನೆಗೈದ ಉಪನ್ಯಾಸಕರನ್ನು ಸನ್ಮಾನಿಸಿ ಅಭಿನಂದಿಸಲಾಯಿತು. ಪ್ರಭು ಮುಶಣ್ಣನವರ ಸಂಗೀತ ಕಾರ್ಯಕ್ರಮ ನಡೆಸಿಕೊಟ್ಟರು. ಜಿಲ್ಲೆಯ ವಿವಿಧ ತಾಲೂಕುಗಳಿಂದ ನೂರಾರು ಉಪನ್ಯಾಸಕರು ಹಾಗೂ ಪ್ರಾಚಾರ್ಯರು ಪಾಲ್ಗೊಂಡಿದ್ದರು.

> ಶಿಕ್ಷಣ ಕ್ಷೇತ್ರದಲ್ಲಿ ಗಮನಾರ್ಹ ಬದಲಾವಣೆಗಳನ್ನು ತರಲು ಸರ್ಕಾರ ಉದ್ದೇಶಿಸಿದೆ. ಪದವಿ ಪೂರ್ವ ಶಿಕ್ಷಣ ವ್ಯವಸ್ಥೆಯಲ್ಲಿ ಆಗುತ್ತಿರುವ ಬದಲಾವಣೆಗಳಿಗೆ ಉಪನ್ಯಾಸಕರು ಸ್ಪಂದಿಸಿ, ವಿದ್ಯಾರ್ಥಿಗಳ ಶ್ರೇಯೋಭಿವೃದ್ಧಿಗಾಗಿ ನಿರಂತರವಾಗಿ ಕಾರ್ಯನಿರ್ವಹಿಸಬೇಕು. ಗದಗ ಜಿಲ್ಲೆಯ ದ್ವಿತೀಯ ಪಿಯುಸಿ ಫಲಿತಾಂಶವನ್ನು ಉತ್ತಮಪಡಿಸುವುದರೊಂದಿಗೆ ವಿದ್ಯಾರ್ಥಿಗಳಿಗೆ ಗುಣಾತ್ಮಕ ಶಿಕ್ಷಣ ನೀಡಬೇಕು. ಉಪನ್ಯಾಸಕರ ಸಮಸ್ಯೆಗಳಿಗೆ ಸ್ಪಂದಿಸಿ ಶೀಘ್ರದಲ್ಲೇ ಪರಿಹಾರ ಒದಗಿಸಲಾಗುವುದು.
>
> \- ಜಿ.ಎಸ್. ಪಾಟೀಲ, ವಿಧಾನಸಭೆ ಸಭಾಧ್ಯಕ್ಷರು

ಪರಿಹರಿಸಬೇಕು. ಈ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ನವೆಂಬರ್‌ನಲ್ಲಿ ಅನುದಾನಿತ ಶಾಲಾ-ಕಾಲೇಜುಗಳನ್ನು ಬಂದ್ ಮಾಡಿ ಉಗ್ರ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಸಿದರು.

ವಿಧಾನಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ಇಡೀ ದೇಶಕ್ಕೆ ಮಾದರಿಯಾಗಿರುವ ಪದವಿ ಪೂರ್ವ ಶಿಕ್ಷಣ ವ್ಯವಸ್ಥೆಯನ್ನು ಶಾಲಾ ಶಿಕ್ಷಣ ಇಲಾಖೆಯಲ್ಲಿ ವಿಲೀನಗೊಳಿಸುವ ಯೋಜನೆಯನ್ನು ಸರ್ಕಾರ ಕೈಬಿಡಬೇಕು. ವಿದ್ಯಾರ್ಥಿಗಳ ಭವಿಷ್ಯದ ಪ್ರಮುಖ ಕೊಂಡಿಯಾಗಿರುವ ಪದವಿ ಪೂರ್ವ ಶಿಕ್ಷಣ ಇಲಾಖೆಯ ಎಲ್ಲ ಸಮಸ್ಯೆಗಳನ್ನು ಆದ್ಯತೆಯ ಮೇರೆಗೆ ಬಗೆಹರಿಸಿ ಉಪನ್ಯಾಸಕರ ನೇಮಕಾತಿಗೆ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಕರ್ನಾಟಕ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಸಂಘದ ಜಿಲ್ಲಾಧ್ಯಕ್ಷ ಎಸ್.ಎಸ್. ಸೋಮಣ್ಣನವರ ಸ್ವಾಗತಿಸಿದರು. ಪ್ರಾಚಾರ್ಯರ ಸಂಘದ ಕಾರ್ಯದರ್ಶಿ ವೈ.ಸಿ. ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿದರು. ಕರ್ನಾಟಕ ರಾಜ್ಯ ಪದವಿ ಪೂರ್ವ ನೌಕರರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಅಶೋಕ ಅಂಗಡಿ ವಂದಿಸಿದರು. ಡಾ. ದತ್ತಪ್ರಸನ್ನ ಪಾಟೀಲ ಹಾಗೂ ಎಫ್.ಎನ್. ಹುಡೇದ ನಿರೂಪಿಸಿದರು.

## ಮೂರು ಹೊತ್ತಿನ ಬುತ್ತಿ ಕಟ್ಟಿ ಅನಿಲ್ ಮೆಣಸಿನಕಾಯಿ ಗೆಲ್ಲಿಸೋಣ: ಶ್ರೀರಾಮುಲು



**ವಿಜಯಸಾಕ್ಷಿ ಸುದ್ದಿ, ಬಳ್ಳಾರಿ / ಗದಗ**

ಮುಂಬರುವ ವಿಧಾನಸಭೆ ಚುನಾವಣೆಯಲ್ಲಿ ಅನಿಲ್ ಮೆಣಸಿನಕಾಯಿ ಅವರನ್ನು ಗೆಲ್ಲಿಸಿ ವಿಧಾನಸೌಧಕ್ಕೆ ಕಳುಹಿಸಬೇಕು. ಅವರ ಗೆಲುವಿಗಾಗಿ ಮೂರು ಹೊತ್ತಿನ ಬುತ್ತಿ ಕಟ್ಟಿಕೊಂಡು ಕಾರ್ಯಕರ್ತರು ಶ್ರಮಿಸೋಣ ಎಂದು ಮಾಜಿ ಸಚಿವ ಶ್ರೀರಾಮುಲು ಕರೆ ನೀಡಿದರು.

ಬಳ್ಳಾರಿ ಜಿಲ್ಲೆಯ ಕಂಪ್ಲಿಯಲ್ಲಿ ಭಾನುವಾರ ಶ್ರೀರಾಮುಲು ಹಾಗೂ ಅನಿಲ್ ಮೆಣಸಿನಕಾಯಿ ನೇತೃತ್ವದಲ್ಲಿ ನಡೆದ ಬಿಜೆಪಿ ಪಾದಯಾತ್ರೆಯಲ್ಲಿ ಮಾತನಾಡಿದ ಅವರು, ಅನಿಲ್ ಮೆಣಸಿನಕಾಯಿ ಜನನಾಯಕರಾಗಿದ್ದು, ಗದಗದಲ್ಲಿ ಬಿಜೆಪಿಗೆ ಉತ್ತಮ ವಾತಾವರಣ ನಿರ್ಮಾಣವಾಗಿದೆ. ಇತರೆ ಎಲ್ಲರಿಗಿಂತಲೂ ಅನಿಲ್ ಮೆಣಸಿನಕಾಯಿ ಅವರ ಮೇಲೆ ತಮ್ಮ ಪ್ರೀತಿ ಹೆಚ್ಚಿದೆ. ಈ ಬಾರಿ ಸರಿಯಾದ ಸಮಯದಲ್ಲಿ ಗದಗಕ್ಕೆ ಆಗಮಿಸಿ ಪ್ರಚಾರ ನಡೆಸುತ್ತೇನೆ. ಅವರನ್ನು ವಿಧಾನಸೌಧದಲ್ಲಿ ಶಾಸಕನಾಗಿ ನೋಡಬೇಕು ಎಂಬ ಆಸೆ ನನಗಿದೆ ಎಂದರು.

ಜೆನ್‌ಜಿ ಪೀಳಿಗೆ ದೇಶದ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡುವ ಶಕ್ತಿಯಾಗಿದ್ದು, ಅವರನ್ನು ಕಡೆಗಣಿಸಲು ಸಾಧ್ಯವಿಲ್ಲ. ಗದಗ ನಗರದಲ್ಲಿ ನೀರು ಹಾಗೂ ಕೈಗಾರಿಕೆಗಾಗಿ ಜೆನ್‌ಜಿ ಯುವಕರು ನಡೆಸಿದ ಪ್ರತಿಭಟನೆ ಕಾಂಗ್ರೆಸ್‌ಗೆ ಎಚ್ಚರಿಕೆ ಗಂಟೆಯಾಗಿದೆ ಎಂದರು.

ಸಕಾರಾತ್ಮಕ ಬೇಡಿಕೆಗಳಿಗಾಗಿ ಜೆನ್‌ಜಿ ಯುವಕರು ನಡೆಸುವ ಹೋರಾಟಕ್ಕೆ ಬಿಜೆಪಿ ಬೆಂಬಲ ನೀಡಲಿದೆ. ಗದಗದ ಜೆನ್‌ಜಿ ಹೋರಾಟದಲ್ಲಿ ಬಿಜೆಪಿ ಕಾರ್ಯಕರ್ತರಿಗೆ ನೋಟಿಸ್ ನೀಡಿರುವ ವಿಷಯ ತಮ್ಮ ಗಮನಕ್ಕೆ ಬಂದಿದ್ದು, ಜಿಲ್ಲಾ ನಾಯಕರೊಂದಿಗೆ ಚರ್ಚಿಸಿ ಸಮಸ್ಯೆ ಬಗೆಹರಿಸುವುದಾಗಿ ಶ್ರೀರಾಮುಲು ಹೇಳಿದರು.

> ನನಗೆ ಅಧಿಕಾರ ಇಲ್ಲ. ಆದರೆ ಜನರ ಮನಸ್ಸಿನಲ್ಲಿ ನನಗೆ ಜಾಗ ಕೊಟ್ಟಿದ್ದೀರಿ. ನಾವು ಈ ಹಿಂದೆ ಹೊಸ ಪಕ್ಷ ಕಟ್ಟಿದಾಗ ಅನಿಲ್ ಮೆಣಸಿನಕಾಯಿ ಅವರು ಜೊತೆಗಿದ್ದಂತೆ ನನಗೆ ಸಹಕಾರ ನೀಡಿದ್ದರು. ಈ ಬಾರಿ ಮೂರು ಹೊತ್ತಿನ ಬುತ್ತಿ ಕಟ್ಟಿಕೊಂಡು ಅವರ ಗೆಲುವಿಗಾಗಿ ಶ್ರಮಿಸೋಣ.
>
> \- ಶ್ರೀರಾಮುಲು, ಮಾಜಿ ಸಚಿವ

ಈ ಸಂದರ್ಭದಲ್ಲಿ ರವಿಕಾಂತ ಅಂಗಡಿ, ವಸಂತ ಪಡಗದ, ಪರಮೇಶ ಲಮಾಣಿ, ಶರಣು ಚಿಂಚಲಿ, ವೀರೇಶ ಕಲ್ಮಠ, ಮಂಜುನಾಥ ಹಳ್ಳೂರುಮಠ, ಬಸಯ್ಯ ಸಾಸ್ವೆಹಳ್ಳಿಮಠ, ಸುಭಾಸ ಸುಂಕದ, ಕುಮಾರ ಮಾರನಬಸರಿ, ಚೆನ್ನಮ್ಮ ಹುಳಕನ್ನವರ, ಆಶಾ ಜೂಲಗುಡ್ಡ, ಟಿ.ಡಿ. ಪೂಜಾರ, ಕಾಳು ತೋಟದ, ಶಶಿಕುಮಾರ್ ಕಳಸಾಪೂರಶೆಟ್ರ, ಫಕ್ಕಿರೇಶ ಮುಳಗುಂದ, ರಾಮು ವಾಲ್ಮೀಕಿ, ದೇವಾನಂದ ತೋಟದ, ಗೋಪಾಲ ನಾಯಕ, ಸಂತೋಷ ಪವಾರ, ಪ್ರಭುಗೌಡ ಪಾಟೀಲ ಸೇರಿದಂತೆ ಇತರರು ಉಪಸ್ಥಿತರಿದ್ದರು.

### ಗದಗ ಜಿಲ್ಲೆಯ ಇಬ್ಬರು ಜನಪ್ರತಿನಿಧಿಗಳಿಗೆ ಉನ್ನತ ಸ್ಥಾನ- ಜಿಲ್ಲಾ ನಾಗರಿಕ ಸಮಿತಿಯಿಂದ ಗೌರವ

# ನಾಳೆ ಸ್ಪೀಕರ್-ಸಭಾಪತಿಗೆ ಸನ್ಮಾನದ ಸಂಭ್ರಮ

**ವಿಜಯಸಾಕ್ಷಿ ಸುದ್ದಿ, ಗದಗ**

ಇತ್ತೀಚೆಗೆ ರಾಜ್ಯದ ವಿವಿಧ ಉನ್ನತ ಹುದ್ದೆಗಳಿಗೆ ಆಯ್ಕೆಯಾಗಿರುವ ಗದಗ ಜಿಲ್ಲೆಯ ಗಣ್ಯರನ್ನು ಗೌರವಿಸುವ ನಿಟ್ಟಿನಲ್ಲಿ ಜಿಲ್ಲಾ ನಾಗರಿಕ ಸಮಿತಿಯಿಂದ ಸೆ. 9ರಂದು ಸನ್ಮಾನ ಸಮಾರಂಭ ಆಯೋಜಿಸಲಾಗಿದೆ ಎಂದು ಮಾಜಿ ಶಾಸಕ ಡಿ.ಆರ್. ಪಾಟೀಲ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಗರದ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿ ಸಮಾರಂಭ ನಡೆಯಲಿದ್ದು, ಪ.ಪೂ. ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳ ದಿವ್ಯ ಸಾನ್ನಿಧ್ಯ ಇರಲಿದೆ. ಶಾಸಕ ಡಾ. ಹೆಚ್.ಕೆ. ಪಾಟೀಲ ಅಧ್ಯಕ್ಷತೆ ವಹಿಸಲಿದ್ದಾರೆ ಎಂದರು.

ರಾಜ್ಯ ವಿಧಾನಸಭೆಯ ಸಭಾಧ್ಯಕ್ಷರಾಗಿ ಸರ್ವಾನುಮತದಿಂದ ಆಯ್ಕೆಯಾಗಿರುವ ರೋಣ ಶಾಸಕ ಜಿ.ಎಸ್. ಪಾಟೀಲ ಹಾಗೂ ರಾಜ್ಯ ವಿಧಾನ ಪರಿಷತ್ ಸಭಾಪತಿಯಾಗಿ ಆಯ್ಕೆಯಾಗಿರುವ ಸಲೀಂ ಅಹ್ಮದ್ ಅವರನ್ನು ಸನ್ಮಾನಿಸಲಾಗುವುದು. ಉನ್ನತ ಶಿಕ್ಷಣ ಸಚಿವ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಬಸವರಾಜ ರಾಯರೆಡ್ಡಿ ಹಾಗೂ ವಿಧಾನ ಪರಿಷತ್ ಉಪಸಭಾಪತಿಯಾಗಿ ಆಯ್ಕೆಯಾಗಿರುವ ಉಮಾಶ್ರೀ ಅವರನ್ನೂ ಗೌರವಿಸಲಾಗುವುದು ಎಂದು ಹೇಳಿದರು.

ವಿಧಾನಸಭೆ ಉಪಾಧ್ಯಕ್ಷರಾಗಿ ಆಯ್ಕೆಯಾಗಿರುವ ಮಂಕಾಳ ವೈದ್ಯ ಹಾಗೂ ಕರ್ನಾಟಕ ಚೇಂಬರ್ ಆಫ್ ಕಾಮರ್ಸ್, ಹುಬ್ಬಳ್ಳಿಯ ನೂತನ ಅಧ್ಯಕ್ಷರಾಗಿ ಆಯ್ಕೆಯಾಗಿರುವ ಜಿ.ಕೆ. ಆದಪ್ಪಗೌಡ್ರ ಅವರಿಗೂ ಸನ್ಮಾನ ನಡೆಯಲಿದೆ ಎಂದು ತಿಳಿಸಿದರು.

ಸಮಾರಂಭದಲ್ಲಿ ಸಂಸದ ಬಸವರಾಜ ಬೊಮ್ಮಾಯಿ, ಶಾಸಕರಾದ ಸಿ.ಸಿ. ಪಾಟೀಲ, ಎನ್.ಹೆಚ್. ಕೋನರಡ್ಡಿ, ಡಾ. ಚಂದ್ರು ಲಮಾಣಿ, ವಿಧಾನ ಪರಿಷತ್ ಸದಸ್ಯರಾದ ಪ್ರೊ. ಎಸ್.ವಿ. ಸಂಕನೂರ, ಎಫ್.ಹೆಚ್. ಜಕ್ಕಪ್ಪನವರ, ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ, ರಾಮಕೃಷ್ಣ ದೊಡ್ಡಮನಿ, ರಾಮಣ್ಣ ಲಮಾಣಿ, ಕೃಷ್ಣಾ ಪರಾಪೂರ, ಶಕುಂತಲಾ ಅಕ್ಕಿ, ಸುಜಾತಾ ದೊಡ್ಡಮನಿ, ವಾಸಣ್ಣ ಕುರಡಗಿ, ಸಿದ್ದಲಿಂಗೇಶ್ವರ ಪಾಟೀಲ ಸೇರಿದಂತೆ ಗಣ್ಯರು ಭಾಗವಹಿಸಲಿದ್ದಾರೆ ಎಂದರು.

ಸುದ್ದಿಗೋಷ್ಠಿಯಲ್ಲಿ ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ, ಸಿದ್ಧಲಿಂಗೇಶ್ವರ ಪಾಟೀಲ, ಸುಜಾತಾ ದೊಡ್ಡಮನಿ, ವಾಸಣ್ಣ ಕುರಡಗಿ, ಕೆ.ಎಚ್. ಪಾಟೀಲ, ರಾಮಕೃಷ್ಣ ದೊಡ್ಡಮನಿ, ಟಿ. ಈಶ್ವರ, ಬಿ.ಬಿ. ಅಸೂಟಿ, ಫಾರೂಕ್ ಹುಬ್ಬಳ್ಳಿ ಹಾಗೂ ವಿವೇಕ ಯಾವಗಲ್ ಉಪಸ್ಥಿತರಿದ್ದರು.

## ಸಂಕ್ಷಿಪ್ತ ಸುದ್ದಿಗಳು

### ರೈಲಿಗೆ ಸಿಲುಕಿ ಅಪರಿಚಿತ ವ್ಯಕ್ತಿ ಸಾವು: ವಾರಸುದಾರರ ಪತ್ತೆಗೆ ರೈಲ್ವೆ ಪೊಲೀಸರ ಮನವಿ

**ವಿಜಯಸಾಕ್ಷಿ ಸುದ್ದಿ, ಗದಗ**

ಕೊಪ್ಪಳ ರೈಲ್ವೆ ನಿಲ್ದಾಣದ ಸಮೀಪ ಸೆ.4ರಂದು ಚಲಿಸುತ್ತಿದ್ದ ರೈಲುಗಾಡಿಗೆ ಸಿಲುಕಿ ಸುಮಾರು 40ರಿಂದ 45 ವರ್ಷದ ಅಪರಿಚಿತ ವ್ಯಕ್ತಿಯೊಬ್ಬರು ಮೃತಪಟ್ಟಿದ್ದು, ಮೃತನ ವಾರಸುದಾರರ ಪತ್ತೆಗೆ ಗದಗ ರೈಲ್ವೆ ಪೊಲೀಸರು ಮನವಿ ಮಾಡಿದ್ದಾರೆ.

ಈ ಕುರಿತು ಗದಗ ರೈಲ್ವೆ ಪೊಲೀಸ್ ಠಾಣೆಯಲ್ಲಿ ಯುಡಿಆರ್ ನಂ.39/2026, ಕಲಂ 194 ಬಿಎನ್‌ಎಸ್‌ಎಸ್ ಅಡಿಯಲ್ಲಿ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಳ್ಳಲಾಗಿದೆ.

**ಮೃತ ವ್ಯಕ್ತಿಯ ಚಹರೆ** ದುಂಡು ಮುಖ, ಅಗಲವಾದ ಹಣೆ, ಉದ್ದನೆಯ ಮೂಗು, ಸಾಧಾರಣ ಗಪ್ಪು ಮೈಬಣ್ಣ, ಸದೃಢ ಮೈಕಟ್ಟು, ಸುಮಾರು 5.5 ಅಡಿ ಎತ್ತರ ಹೊಂದಿದ್ದು, ತಲೆಯಲ್ಲಿ ಸುಮಾರು 2ರಿಂದ 3 ಇಂಚು ಉದ್ದದ ಕಪ್ಪು ಕೂದಲು, ಸುಮಾರು ಅರ್ಧ ಇಂಚು ಕಪ್ಪು ದಾಡಿ ಹಾಗೂ ಮೀಸೆ ಹೊಂದಿರುತ್ತಾರೆ.

**ಧರಿಸಿದ್ದ ಬಟ್ಟೆಗಳು** ಆಫ್ ಟಿ-ಶರ್ಟ್, ಅದರಲ್ಲಿ ಕಂದು ಬಣ್ಣದ ಲೈನ್‌ಗಳಿದ್ದು, ಬಿಳಿ ಲುಂಗಿ ಹಾಗೂ ಕೆಂಪು ಬಣ್ಣದ ಅಂಡರ್‌ವೇರ್ ಧರಿಸಿದ್ದರು.

**ವಿಶೇಷ ಗುರುತುಗಳು** ಎಡಗೈ ಮುಂಗೈ ಮೇಲೆ 'ಮಾಳಾ', ಬಲಗೈ ಮುಂಗೈ ಮೇಲೆ 'ಅಮ್ಮ' ಎಂದು ಹಚ್ಚೆ ಹಾಕಿಸಿಕೊಂಡಿದ್ದು, ಬಲಗೈ ರಟ್ಟೆಯ ಮೇಲೆ ಸಂತಕವಿ ಕನಕದಾಸರ ಭಾವಚಿತ್ರವನ್ನು ಹಚ್ಚೆ ಹಾಕಿಸಿಕೊಂಡಿರುತ್ತಾರೆ. ಇದು ಮೃತನ ಪ್ರಮುಖ ವಿಶೇಷ ಗುರುತಾಗಿದೆ.

ಮೃತ ವ್ಯಕ್ತಿಯ ಕುರಿತು ಯಾರಿಗಾದರೂ ಮಾಹಿತಿ ಇದ್ದಲ್ಲಿ ಅಥವಾ ಮೃತನನ್ನು ಗುರುತಿಸುವವರಾಗಿದ್ದಲ್ಲಿ, ಗದಗ ರೈಲ್ವೆ ಪೊಲೀಸ್ ಠಾಣೆಯ 08372-278744, ಮೊಬೈಲ್ 9480802128, ಇ-ಮೇಲ್ gadagrly@ksp.gov.in ಅಥವಾ ರೈಲ್ವೆ ಪೊಲೀಸ್ ಕಂಟ್ರೋಲ್ ರೂಂ 080-22871291ಗೆ ಮಾಹಿತಿ ನೀಡುವಂತೆ ಪೊಲೀಸರು ಕೋರಿದ್ದಾರೆ.

### ಸುಜ್ಞಾನದ ಬೆಳಕು ನೀಡುವವನೇ ಗುರು



**ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಜೀವನದಲ್ಲಿನ ಅಜ್ಞಾನದ ಕತ್ತಲೆಯನ್ನು ಕಳೆದು ಸುಜ್ಞಾನದ ಬೆಳಕು ನೀಡುವವನೇ ಗುರು ಎಂದು ದೈಹಿಕ ಶಿಕ್ಷಕ ವಿ.ಟಿ. ಅಂಗಡಿ ಹೇಳಿದರು.

ಪಟ್ಟಣದ ಸರಕಾರಿ ಪ್ರೌಢಶಾಲೆಯಲ್ಲಿ ಶಿಕ್ಷಕರ ದಿನಾಚರಣೆ ನಿಮಿತ್ತ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.

ಪ್ರತಿಯೊಬ್ಬರ ಜೀವನದಲ್ಲೂ ಆದರ್ಶ ಗುರುಗಳ ಮಾರ್ಗದರ್ಶನದಿಂದ ಬದುಕಿನಲ್ಲಿ ಬದಲಾವಣೆ ಸಾಧ್ಯ. ಇದನ್ನು ಅರಿತು ಮುನ್ನಡೆದಾಗ ಜೀವನದಲ್ಲಿ ಉತ್ತಮ ಮಾರ್ಗ ದೊರೆಯುತ್ತದೆ. ವಿದ್ಯಾರ್ಥಿ ಜೀವನ ಅತ್ಯಂತ ಮಹತ್ವದ್ದಾಗಿದ್ದು, ಈ ಅವಧಿಯಲ್ಲಿ ಮಕ್ಕಳು ಗುರುಗಳು ಬೋಧಿಸುವ ಪಾಠಗಳನ್ನು ಚಾಚೂತಪ್ಪದೆ ಆಲಿಸಿ, ಪಾಲಿಸಬೇಕು. ಇದರಿಂದ ಬದುಕು ಹಸನಾಗುತ್ತದೆ ಎಂದರು.

ಶಿಕ್ಷಕಿ ಗೀತಾ ಕುಂದರಗಿ ಮಾತನಾಡಿ, ವಿದ್ಯಾರ್ಥಿ ಜೀವನ ಅತ್ಯಂತ ಅಮೂಲ್ಯವಾಗಿದ್ದು, ಈ ಸಮಯದಲ್ಲಿ ಗುರುವಿನ ಮಾರ್ಗದರ್ಶನದಲ್ಲಿ ಸಾಗಿದಾಗ ಭವಿಷ್ಯದಲ್ಲಿ ಉತ್ತಮ ಪ್ರಜೆಗಳಾಗಿ ಹೊರಹೊಮ್ಮಲು ಸಾಧ್ಯವಾಗುತ್ತದೆ ಎಂದರು.

ಎಸ್‌ಡಿಎಂಸಿ ಅಧ್ಯಕ್ಷ ಎಂ.ಎಚ್. ಮಾನೇಗಾರ, ಪ್ರಧಾನ ಗುರು ಎಸ್.ಎಚ್. ಪೂಜಾರ, ವಿ.ಟಿ. ಅಂಗಡಿ, ನೂರಹ್ಮದ ನಧಾಫ್, ಬಸವರಾಜ ಗೌರಿಮನಿ, ಮಂಜುನಾಥ ಕಲ್ಯಾಣಮಠ, ರಾಜು ಸಣ್ಣತಮ್ಮಣ್ಣವರ, ಎಸ್.ವಿ. ತಿಮ್ಮಾಪೂರ, ಗೀತಾ ಪಾಟೀಲ, ಗೀತಾ ಕುಂದರಗಿ, ಕವಿತಾ ಬಿನ್ನಾಳ ಹಾಗೂ ಸೌಜನ್ಯಾ ಕೊಲ್ಲಾರಿ ಇದ್ದರು.

### ಗುರುವಿನ ಮಹತ್ವ ಅಪಾರ



**ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಗುರುವಿನ ಮಹತ್ವ ಅಪಾರವಾದದ್ದು ಎಂದು ಶಿಕ್ಷಕಿ ಆರ್. ಸೈದಾಪೂರ ಹೇಳಿದರು.

ಪಟ್ಟಣದ ವಿದ್ಯಾನಗರದ ಸರಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಶಿಕ್ಷಕರ ದಿನಾಚರಣೆ ನಿಮಿತ್ತ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.

ಪ್ರತಿಯೊಬ್ಬ ವಿದ್ಯಾರ್ಥಿಯ ಪ್ರಗತಿಯ ಹಿಂದೆ ಒಬ್ಬ ಗುರುವಿನ ಮಾರ್ಗದರ್ಶನ ಅಗತ್ಯ. ಆಗ ಮಕ್ಕಳ ಭವಿಷ್ಯ ಉಜ್ವಲವಾಗಲು ಸಾಧ್ಯವಾಗುತ್ತದೆ. ಪ್ರತಿ ಶಾಲೆಗೂ ಉತ್ತಮ ಶಿಕ್ಷಕರು ಅಗತ್ಯವಿದ್ದು, ಇದರಿಂದ ಶಾಲೆಯ ಅಭಿವೃದ್ಧಿಗೂ ಸಹಕಾರಿಯಾಗುತ್ತದೆ ಎಂದರು.

ನಮ್ಮ ಕಿರಿಯ ಪ್ರಾಥಮಿಕ ಶಾಲೆಯ ಪ್ರಧಾನ ಗುರುಗಳು ನಿವೃತ್ತರಾದ ಬಳಿಕ ನನಗೆ ಚಿಂತೆಯಾಗಿತ್ತು. ಆದರೆ ಶಾಲೆಗೆ ನೂತನವಾಗಿ ಪಿ.ಬಿ. ಕೆಂಚನಗೌಡ್ರ ಅವರು ಬಂದ ಬಳಿಕ ಶಾಲೆಯ ಕೀರ್ತಿ ಹೆಚ್ಚಾಗಿದೆ. ಹೀಗೆ ಪ್ರತಿಯೊಂದು ಹಂತದಲ್ಲೂ ಪ್ರಗತಿ ಸಾಧಿಸಲು ಗುರುವಿನ ಕೃಪೆ ಅಗತ್ಯ ಎಂದರು.

ಪಿ.ಬಿ. ಕೆಂಚನಗೌಡ್ರ ಮಾತನಾಡಿ, ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ತತ್ವ-ಸಿದ್ಧಾಂತಗಳು ಇಂದಿಗೂ ಪ್ರಸ್ತುತವಾಗಿವೆ. ಅವರು ಹಾಕಿಕೊಟ್ಟ ಮಾರ್ಗದಲ್ಲಿ ಸಾಗುವುದರ ಜತೆಗೆ ಮಕ್ಕಳ ಪ್ರಗತಿಗೆ ಶ್ರಮಿಸಿ ಅವರ ಭವಿಷ್ಯ ರೂಪಿಸೋಣ ಎಂದರು.

ಸಂವೇದನಾ ರಹಿತ ವರ್ತನೆ ಖಂಡಿಸಿ ರಾಜೀನಾಮೆಗೂ ಆಗ್ರಹಿಸಿದ ಪತ್ರಕರ್ತರು, ಲೇಖಕರು, ಸಾಮಾಜಿಕ ಕಾರ್ಯಕರ್ತರು

# ಪೌರಕಾರ್ಮಿಕರಿಗೆ ಅವಮಾನ: ಕೃಷ್ಣ ಬೈರೇಗೌಡ ಕ್ಷಮೆ ಕೇಳಲಿ



**ವಿಜಯಸಾಕ್ಷಿ ಸುದ್ದಿ, ಗದಗ**

ಕೆಲಸ ಖಾಯಂ ಸೇರಿದಂತೆ ತಮ್ಮ ಹಕ್ಕುಗಳಿಗಾಗಿ ಮನವಿ ಸಲ್ಲಿಸಲು ಬಂದ ಪೌರಕಾರ್ಮಿಕರನ್ನು ಸಚಿವ ಕೃಷ್ಣ ಬೈರೇಗೌಡ ಅವರು ನಡೆಸಿಕೊಂಡ ರೀತಿಯನ್ನು ಖಂಡಿಸಿರುವ ಪತ್ರಕರ್ತರು, ಲೇಖಕರು, ನ್ಯಾಯವಾದಿಗಳು ಹಾಗೂ ಸಾಮಾಜಿಕ ಕಾರ್ಯಕರ್ತರು, ಪೌರಕಾರ್ಮಿಕ ಸಮುದಾಯದ ಕ್ಷಮೆ ಕೇಳಬೇಕು ಎಂದು ಆಗ್ರಹಿಸಿದ್ದಾರೆ.

ಈ ಕುರಿತು ಮಾಧ್ಯಮಗಳಿಗೆ ಬಿಡುಗಡೆ ಮಾಡಿರುವ ಪತ್ರದಲ್ಲಿ, ಸರ್ಕಾರಿ ಕೆಲಸದಲ್ಲಿ ಲೋಪಗಳಿದ್ದರೆ ಜವಾಬ್ದಾರಿಯುತ ಸಚಿವರು ಪ್ರಶ್ನಿಸುವುದು ಸಹಜ. ಆದರೆ ಪೌರಕಾರ್ಮಿಕರನ್ನೇ ಗುರಿಯಾಗಿಸಿ ಪ್ರಶ್ನಿಸುವ ಧೋರಣೆ ಪೂರ್ವಗ್ರಹಪೀಡಿತವಾಗಿದ್ದರೆ ಅದು ಅಕ್ಷಮ್ಯ ಎಂದು ಹೇಳಿದ್ದಾರೆ.

ಪೌರಕಾರ್ಮಿಕರ ಕೆಲಸದ ಪರಿಸ್ಥಿತಿ, ಅವರಿಗೆ ಅಗತ್ಯ ಸುರಕ್ಷತಾ ಪರಿಕರಗಳ ಲಭ್ಯತೆ ಹಾಗೂ ಆರೋಗ್ಯ ತಪಾಸಣೆ ಕುರಿತು ಸರ್ಕಾರ ಗಂಭೀರವಾಗಿ ಗಮನಹರಿಸಬೇಕು. ಕಸ ವಿಲೇವಾರಿ ಸೇರಿದಂತೆ ಅಪಾಯಕಾರಿ ಸ್ವಚ್ಛತಾ ಕಾರ್ಯ ನಿರ್ವಹಿಸುವ ಕಾರ್ಮಿಕರ ಸಮಸ್ಯೆಗಳನ್ನು ಅರಿಯದೆ ಅವರನ್ನೇ ಪ್ರಶ್ನಿಸುವುದು ಸರಿಯಲ್ಲ ಎಂದು ಪತ್ರದಲ್ಲಿ ಆಕ್ಷೇಪಿಸಲಾಗಿದೆ.

ಗುತ್ತಿಗೆದಾರರು ಹಾಗೂ ಅಧಿಕಾರಿಗಳ ಶೋಷಣೆಯಿಂದ ನಲುಗಿರುವ ಪೌರಕಾರ್ಮಿಕರು ತಮ್ಮ ಅಹವಾಲು ಹೇಳಿಕೊಳ್ಳಲು ಬಂದ ಸಂದರ್ಭದಲ್ಲಿ ಸಚಿವರು ಬಳಸಿದ ಭಾಷೆ ಮತ್ತು ಪ್ರಶ್ನಿಸಿದ ರೀತಿ ಸಂವೇದನಾ ರಹಿತವಾಗಿದ್ದು, ನಿರ್ದಯವಾಗಿದೆ. ಅಧಿಕಾರದಲ್ಲಿರುವವರು ಯಾವುದೇ ಸಂದರ್ಭದಲ್ಲೂ ಮಾನವೀಯ ಸಂವೇದನೆ ಕಳೆದುಕೊಳ್ಳಬಾರದು ಎಂದು ಒತ್ತಾಯಿಸಿದ್ದಾರೆ.

ಪೌರಕಾರ್ಮಿಕರನ್ನು ಅವಮಾನಿಸುವ ರೀತಿಯಲ್ಲಿ ನಡೆದುಕೊಂಡಿರುವ ಸಚಿವ ಕೃಷ್ಣ ಬೈರೇಗೌಡ ಅವರು ಕೂಡಲೇ ಪೌರಕಾರ್ಮಿಕ ಸಮುದಾಯದ ಕ್ಷಮೆ ಕೇಳಬೇಕು. ಸಂವೇದನೆ ಕಳೆದುಕೊಂಡಿದ್ದರೆ ಅಧಿಕಾರದಲ್ಲಿ ಮುಂದುವರಿಯುವ ನೈತಿಕ ಹಕ್ಕಿಲ್ಲ, ಅವರು ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿದ ಪತ್ರಕ್ಕೆ ರುದ್ರಪ್ಪ ಸಿ., ಎನ್. ರವಿಕುಮಾರ್, ಕೆ.ಪಿ. ಶ್ರೀಪಾಲ್, ವೈ.ಜಿ. ಅಶೋಕ್ ಕುಮಾರ್, ಕೆ.ಎಲ್. ಅಶೋಕ್, ರಶ್ಮಿ ಎಸ್., ಬಸವರಾಜ ಸೂಳಿಭಾವಿ (ಬಸೂ), ಮೀನಾಕ್ಷಿ ಬಾಳಿ, ಡಾ. ಎಚ್.ಎಸ್. ಅನುಪಮಾ, ಸನತಕುಮಾರ ಬೆಳಗಲಿ ಸೇರಿದಂತೆ ವಿವಿಧ ಕ್ಷೇತ್ರಗಳ ಹಲವರು ಸಹಿ ಹಾಕಿದ್ದಾರೆ.

## ಸಿಎಸ್ ಪರೀಕ್ಷೆಯಲ್ಲಿ ರೀತ್ ಜೈನ್‌ಗೆ 7ನೇ ರ್‍ಯಾಂಕ್



**ವಿಜಯಸಾಕ್ಷಿ ಸುದ್ದಿ, ಗದಗ**

ಆದರ್ಶ ಶಿಕ್ಷಣ ಸಂಸ್ಥೆಯ ವಿದ್ಯಾರ್ಥಿನಿ ಕು. ರೀತ್ ಸಚಿನ್ ಜೈನ್ ಅವರು ಕಂಪನಿ ಕಾರ್ಯದರ್ಶಿ (ಸಿಎಸ್) ಪರೀಕ್ಷೆಯಲ್ಲಿ ಅಖಿಲ ಭಾರತ ಮಟ್ಟದಲ್ಲಿ 7ನೇ ರ್‍ಯಾಂಕ್ ಗಳಿಸಿ ಗಮನಾರ್ಹ ಸಾಧನೆ ಮಾಡಿದ್ದಾರೆ.

ಆದರ್ಶ ಶಿಕ್ಷಣ ಸಮಿತಿಯ ವತಿಯಿಂದ ಶಿಕ್ಷಕರ ದಿನಾಚರಣೆಯನ್ನು ಅತ್ಯಂತ ಉತ್ಸಾಹದಿಂದ ಆಚರಿಸಲಾಯಿತು. ಇದೇ ಸಂದರ್ಭದಲ್ಲಿ ಸಿಎಸ್ ಪರೀಕ್ಷೆಯಲ್ಲಿ ದೇಶಕ್ಕೆ 7ನೇ ರ್‍ಯಾಂಕ್ ಗಳಿಸಿದ ಕು. ರೀತ್ ಸಚಿನ್ ಜೈನ್ ಅವರನ್ನು ಸಂಸ್ಥೆಯ ವತಿಯಿಂದ ಸನ್ಮಾನಿಸಿ ಅಭಿನಂದಿಸಲಾಯಿತು.

ಆದರ್ಶ ಶಿಕ್ಷಣ ಸಮಿತಿ ಕ್ಯಾಂಪಸ್‌ನಲ್ಲಿಯೇ ತಮ್ಮ ಪದವಿಪೂರ್ವ ಹಾಗೂ ಪದವಿ ಶಿಕ್ಷಣವನ್ನು ಪೂರ್ಣಗೊಳಿಸಿರುವ ರೀತ್ ಜೈನ್ ಅವರ ಸಾಧನೆಯನ್ನು ಕಾರ್ಯಕ್ರಮದಲ್ಲಿ ಗಣ್ಯರು ಹಾಗೂ ಬೋಧಕ ವೃಂದದವರು ಕೊಂಡಾಡಿದರು. ಜೈನ್ ಕುಟುಂಬಕ್ಕೂ ಸಂಸ್ಥೆಗೂ ಇರುವ ದೀರ್ಘಕಾಲದ ಸಂಬಂಧವನ್ನು ಸ್ಮರಿಸಿದ ಹಲವಾರು ಬೋಧಕ ವೃಂದದ ಸದಸ್ಯರು, ರೀತ್ ಜೈನ್ ಅವರ ಶೈಕ್ಷಣಿಕ ಸಾಧನೆ ಹಾಗೂ ಪರಿಶ್ರಮದ ಕುರಿತು ತಮ್ಮ ಅನಿಸಿಕೆಗಳನ್ನು ಹಂಚಿಕೊಂಡರು.

ಸಂಸ್ಥೆಯ ಉಪಾಧ್ಯಕ್ಷರಾದ ಶ್ರೀ ಪಿ.ಆರ್. ಅಡವಿಯವರು ಮಾತನಾಡಿ, ಜೈನ್ ಕುಟುಂಬದ ಶೈಕ್ಷಣಿಕ ಸಾಧನೆ ಹಾಗೂ ಸಂಸ್ಥೆಯೊಂದಿಗಿನ ಅವರ ನಂಟನ್ನು ಸ್ಮರಿಸುತ್ತಾ ರೀತ್ ಜೈನ್ ಅವರ ಸಾಧನೆಯನ್ನು ಶ್ಲಾಘಿಸಿದರು.

ಪದವಿಪೂರ್ವ ಮಹಾವಿದ್ಯಾಲಯದ ಪ್ರಾಚಾರ್ಯರಾದ ಶ್ರೀ ರವೀಂದ್ರಕುಮಾರ ಕುಲಕರ್ಣಿ, ಪದವಿ ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ. ವಿ.ಟಿ. ನಾಯ್ಕರ್ ಹಾಗೂ ಪ್ರೊ. ಶ್ರೀಮತಿ ಅಕ್ಷತಾ ಎಳ್ಳೂರು ಅವರು ರೀತ್ ಜೈನ್ ಅವರ ಕಠಿಣ ಪರಿಶ್ರಮ, ಶೈಕ್ಷಣಿಕ ಬದ್ಧತೆ ಹಾಗೂ ಸಾಧನೆಯನ್ನು ಮೆಚ್ಚಿ ಮಾತನಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಅಧ್ಯಕ್ಷರಾದ ಶ್ರೀ ಕೆ.ವಿ. ಕುಷ್ಟಗಿ ಅವರು ಕು. ರೀತ್ ಜೈನ್ ಅವರನ್ನು ಅಭಿನಂದಿಸಿ, ಅವರ ವೃತ್ತಿಪರ ಜೀವನದಲ್ಲಿಯೂ ಯಶಸ್ಸು ಮುಂದುವರಿಯಲಿ ಎಂದು ಹಾರೈಸಿದರು. ಶಿಕ್ಷಕರ ದಿನದ ಅಂಗವಾಗಿ ಬೋಧಕ ಸಿಬ್ಬಂದಿಗೆ ಶುಭಾಶಯಗಳನ್ನು ಸಲ್ಲಿಸಿದರು.

ಸಂಸ್ಥೆಯ ಕಾರ್ಯದರ್ಶಿ ಶ್ರೀ ಎ.ಡಿ. ಗೊಡಖಿಂಡಿ ಅವರು ರೀತ್ ಜೈನ್ ಹಾಗೂ ಅವರ ಕುಟುಂಬದೊಂದಿಗಿನ ತಮ್ಮ ಹಿಂದಿನ ನೆನಪುಗಳನ್ನು ಸ್ಮರಿಸಿಕೊಂಡು, ಅವರ ಗಮನಾರ್ಹ ಯಶಸ್ಸಿಗೆ ಸಂತಸ ವ್ಯಕ್ತಪಡಿಸಿದರು.

**ಶಿಕ್ಷಕರ ಪ್ರೋತ್ಸಾಹವೇ ಯಶಸ್ಸಿನ ಬಲ**

ಸನ್ಮಾನ ಸ್ವೀಕರಿಸಿ ಮಾತನಾಡಿದ ಕು. ರೀತ್ ಜೈನ್ ಅವರು ತಮ್ಮ ಕಾಲೇಜು ದಿನಗಳ ಅನುಭವಗಳು ಹಾಗೂ ನೆನಪುಗಳನ್ನು ಹಂಚಿಕೊಂಡರು. ನಿರಂತರ ಪ್ರೋತ್ಸಾಹ, ಮಾರ್ಗದರ್ಶನ ಮತ್ತು ಪ್ರೇರಣೆ ನೀಡಿದ ಬೋಧಕ ವೃಂದಕ್ಕೆ ಕೃತಜ್ಞತೆ ಸಲ್ಲಿಸಿದ ಅವರು, ಶಿಕ್ಷಕರಿಂದ ದೊರೆತ ಪ್ರೇರಣೆ ಹಾಗೂ ಬೆಂಬಲ ತಮ್ಮ ಯಶಸ್ಸಿನಲ್ಲಿ ಪ್ರಮುಖ ಪಾತ್ರ ವಹಿಸಿದೆ ಎಂದು ಹೇಳಿದರು. ತಮ್ಮ ಸಾಧನೆಗೆ ಸಹಕರಿಸಿದ ಇಡೀ ತಂಡಕ್ಕೆ ಧನ್ಯವಾದ ಅರ್ಪಿಸಿದರು.

ಸಂಸ್ಥೆಯ ಚೇರ್ಮನ್ ಶ್ರೀ ಆನಂದ್ ಎಲ್. ಪೋತ್ನಿಸ್ ಅವರು ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಆದರ್ಶ ಶಿಕ್ಷಣ ಸಂಸ್ಥೆಯ ವಿದ್ಯಾರ್ಥಿಗಳು ಸಿ.ಎ., ಸಿ.ಎಸ್. ಸೇರಿದಂತೆ ವಿವಿಧ ಶೈಕ್ಷಣಿಕ ಹಾಗೂ ವೃತ್ತಿಪರ ಕ್ಷೇತ್ರಗಳಲ್ಲಿ ಗಮನಾರ್ಹ ಸಾಧನೆ ಮಾಡುತ್ತಿರುವುದು ಸಂಸ್ಥೆಗೆ ಸಂತಸ ಹಾಗೂ ಹೆಮ್ಮೆಯ ವಿಷಯವಾಗಿದೆ ಎಂದರು. ಸ್ಪರ್ಧಾತ್ಮಕ ಯುಗದಲ್ಲಿ ಇನ್ನಷ್ಟು ವಿದ್ಯಾರ್ಥಿಗಳು ಉನ್ನತ ಸಾಧನೆ ಮಾಡುವ ಮೂಲಕ ಸಂಸ್ಥೆಗೆ ಕೀರ್ತಿ ತರುವಂತಾಗಲಿ ಎಂದು ಶುಭ ಹಾರೈಸಿದರು.

ಕಾರ್ಯಕ್ರಮದಲ್ಲಿ ಜಂಟಿ ಕಾರ್ಯದರ್ಶಿ ಶ್ರೀ ಶೈಲೇಶ್ ಬಾಗ್ಮಾರ್, ಶ್ರೀ ಎ.ವೈ. ಇಂಚಲ, ಮೂರು ಅಂಗಸಂಸ್ಥೆಗಳ ಪ್ರಾಚಾರ್ಯರು, ಶಿಕ್ಷಕರು ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

ಎಂಎಲ್‌ಸಿ, ನಿಗಮ-ಮಂಡಳಿಗಳಲ್ಲಿ ಸೂಕ್ತ ಸ್ಥಾನಮಾನಕ್ಕೆ ಅಖಿಲ ಕರ್ನಾಟಕ ಮುಸ್ಲಿಂ ಮಹಾಸಭಾ ಆಗ್ರಹ

## ಮತಕ್ಕೆ ಮಾತ್ರ ಸೀಮಿತವಾಗದಿರಲಿ ಮುಸ್ಲಿಮರ ಪ್ರಾತಿನಿಧ್ಯ!




**ವಿಜಯಸಾಕ್ಷಿ ಸುದ್ದಿ, ಗದಗ**

ಉತ್ತರ ಕರ್ನಾಟಕದ ರಾಜಕೀಯ ಹಾಗೂ ಅಧಿಕಾರ ಹಂಚಿಕೆಯಲ್ಲಿ ಪ್ರಾದೇಶಿಕ ಅಸಮತೋಲನ ನಿವಾರಿಸಿ, ಈ ಭಾಗದ ಮುಸ್ಲಿಂ ಸಮುದಾಯಕ್ಕೆ ಸೂಕ್ತ ರಾಜಕೀಯ ಪ್ರಾತಿನಿಧ್ಯ ಕಲ್ಪಿಸಬೇಕು ಎಂದು ಅಖಿಲ ಕರ್ನಾಟಕ ಮುಸ್ಲಿಂ ಮಹಾಸಭಾ (ರಿ.) ಆಗ್ರಹಿಸಿದೆ.

ಹುಬ್ಬಳ್ಳಿಯಲ್ಲಿ ನಡೆದ ಮಹಾಸಭಾದ ಸಭೆಯಲ್ಲಿ ಮಾತನಾಡಿದ ರಾಜ್ಯಾಧ್ಯಕ್ಷ ಮಹ್ಮದಶಫಿ ನಾಗರಕಟ್ಟಿ, ಸಚಿವ ಸಂಪುಟದಲ್ಲಿ ದಕ್ಷಿಣ ಕರ್ನಾಟಕದ ಶಾಸಕರಿಗೆ ಹೆಚ್ಚಿನ ಅವಕಾಶ ದೊರೆತಿದ್ದು, ಉತ್ತರ ಕರ್ನಾಟಕದ ಶಾಸಕರಿಗೆ ಸೂಕ್ತ ಪ್ರಾತಿನಿಧ್ಯ ಸಿಗದಿರುವುದು ಈ ಭಾಗದ ಜನರಲ್ಲಿ ನಿರಾಸೆ ಮೂಡಿಸಿದೆ ಎಂದರು.

ಉತ್ತರ ಕರ್ನಾಟಕದ ಮುಸ್ಲಿಂ ಸಮುದಾಯವು ಕಾಂಗ್ರೆಸ್ ಪಕ್ಷದ ಕಷ್ಟದ ದಿನಗಳಲ್ಲೂ ನಿಷ್ಠೆಯಿಂದ ಬೆಂಬಲಿಸಿ, ಪಕ್ಷದ ಗೆಲುವಿಗೆ ಮಹತ್ವದ ಕೊಡುಗೆ ನೀಡಿದೆ. ಚುನಾವಣಾ ಸಂದರ್ಭದಲ್ಲಿ ಸಮುದಾಯದ ಬೆಂಬಲವನ್ನು ಪಡೆಯುವ ಪಕ್ಷ, ಅಧಿಕಾರ ಮತ್ತು ಅವಕಾಶಗಳ ಹಂಚಿಕೆಯಲ್ಲೂ ಸಮುದಾಯದ ಕೊಡುಗೆಯನ್ನು ಪರಿಗಣಿಸಬೇಕು ಎಂದು ಮಹಾಸಭಾ ಒತ್ತಾಯಿಸಿದೆ.

ಕಿತ್ತೂರು ಕರ್ನಾಟಕ ಭಾಗದಲ್ಲಿ ಹಲವು ವರ್ಷಗಳಿಂದ ಮುಸ್ಲಿಂ ಸಮುದಾಯದ ಶಾಸಕರಿಗೆ ಸಚಿವ ಸ್ಥಾನ ದೊರೆಯದಿರುವುದು ಹಾಗೂ ರಾಜ್ಯಮಟ್ಟದ ನಿಗಮ-ಮಂಡಳಿಗಳಲ್ಲೂ ಸಮರ್ಪಕ ಪ್ರಾತಿನಿಧ್ಯ ಸಿಗದಿರುವುದು ಸಮುದಾಯದಲ್ಲಿ ಅಸಮಾಧಾನಕ್ಕೆ ಕಾರಣವಾಗಿದೆ. ಈ ಬಾರಿ ಅರ್ಹತೆ, ಸೇವೆ ಹಾಗೂ ಜನಪ್ರತಿನಿಧಿತ್ವದ ಆಧಾರದಲ್ಲಿ ಸಮರ್ಥ ಮುಸ್ಲಿಂ ನಾಯಕರಿಗೆ ಅವಕಾಶ ಕಲ್ಪಿಸಬೇಕು ಎಂದು ಆಗ್ರಹಿಸಲಾಗಿದೆ.

ಮುಖ್ಯಮಂತ್ರಿ, ಎಐಸಿಸಿ ಅಧ್ಯಕ್ಷರು ಹಾಗೂ ಕೆಪಿಸಿಸಿ ಅಧ್ಯಕ್ಷರು ಈ ಬೇಡಿಕೆಯನ್ನು ಗಂಭೀರವಾಗಿ ಪರಿಗಣಿಸಿ, ಉತ್ತರ ಕರ್ನಾಟಕದ ಅರ್ಹ ಮುಸ್ಲಿಂ ನಾಯಕರಿಗೆ ವಿಧಾನ ಪರಿಷತ್ (ಎಂಎಲ್‌ಸಿ) ಸ್ಥಾನ ಹಾಗೂ ರಾಜ್ಯಮಟ್ಟದ ನಿಗಮ-ಮಂಡಳಿಗಳಲ್ಲಿ ಸೂಕ್ತ ಸ್ಥಾನಮಾನ ಕಲ್ಪಿಸುವ ಮೂಲಕ ನ್ಯಾಯ ಒದಗಿಸಬೇಕು ಎಂದು ಮಹಾಸಭಾ ಮನವಿ ಮಾಡಿದೆ.

ಕಾಂಗ್ರೆಸ್‌ನಿಂದ ಆಯ್ಕೆಯಾಗಿರುವ ಉತ್ತರ ಕರ್ನಾಟಕದ ಶಾಸಕರು ಹಾಗೂ ಜನಪ್ರತಿನಿಧಿಗಳು ಪಕ್ಷದ ವರಿಷ್ಠರ ಮುಂದೆ ಈ ಭಾಗದ ಮುಸ್ಲಿಂ ಸಮುದಾಯದ ರಾಜಕೀಯ ಪ್ರಾತಿನಿಧ್ಯದ ಅಗತ್ಯವನ್ನು ಬಲವಾಗಿ ಪ್ರತಿಪಾದಿಸಬೇಕು ಎಂದು ಸಭೆಯಲ್ಲಿ ಕರೆ ನೀಡಲಾಯಿತು.

ಸಭೆಯಲ್ಲಿ ರಾಜ್ಯ ಉಪಾಧ್ಯಕ್ಷ ಆಬೀದ್ ಜೋಡಗೇರಿ, ರಾಜ್ಯ ಸಹ ಕಾರ್ಯದರ್ಶಿ ಎಸ್.ಎಂ. ರೋಣ, ಎಂ.ಡಿ. ರಫೀಕ್ ಜಮಾದಾರ್, ಇಸ್ಮಾಯಿಲ್ ಸಾಬ್ ಆಗಸನಕಟ್ಟಿ, ಎ.ಎಫ್. ರಶ್ಮಿ, ಅಬ್ದುಲ್ ಮುನಾಫ್ ಖಾಜಿ, ಅಸ್ಲಂ ನಾಲಬಂದ, ಮಜೀದ್ ಮನಿಕನಗರ ಸೇರಿದಂತೆ ಮಹಾಸಭಾದ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಪತ್ರಿಕಾ ವಿತರಕರ ಸೇವೆ ಸ್ಮರಣೀಯ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಮುಂಜಾನೆ ಇಡೀ ಜಗತ್ತು ನಿದ್ದೆಯಿಂದ ಏಳುವ ಮುನ್ನವೇ ಚಳಿ-ಮಳೆ ಎನ್ನದೆ ಸಾರ್ವಜನಿಕರ ಮನೆ ಬಾಗಿಲಿಗೆ ಜ್ಞಾನದ ಬೆಳಕನ್ನು ತಲುಪಿಸುವ ಪತ್ರಿಕಾ ವಿತರಕರ ಸೇವೆ ಸ್ಮರಣೀಯ ಎಂದು ಪಿಎಸ್‌ಐ ಆನಂದ ಕ್ಯಾರಿಕಟ್ಟಿ ಹೇಳಿದರು.

ಪಟ್ಟಣದ ಜಿಲ್ಲಾ ವರದಿಗಾರ ಮಾಳಿಂಗರಾಯ ಪೂಜಾರ ಅವರ ನಿವಾಸದಲ್ಲಿ ವಿಶ್ವ ಪತ್ರಿಕಾ ವಿತರಕರ ದಿನದ ಅಂಗವಾಗಿ ಪತ್ರಿಕೆ ಹಂಚುವ ಮಕ್ಕಳಿಗೆ ನೋಟ್ ಬುಕ್ ಹಾಗೂ ಪೆನ್ ಬಾಕ್ಸ್ ವಿತರಿಸುವ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಪತ್ರಿಕಾ ವಿತರಕರು ಪ್ರತಿನಿತ್ಯ ಮುಂಜಾನೆ ತಮ್ಮ ಕರ್ತವ್ಯ ನಿರ್ವಹಿಸುವ ಮೂಲಕ ಸುದ್ದಿಯನ್ನು ಮನೆಮನೆಗೆ ತಲುಪಿಸುವ ಕಾರ್ಯ ಮಾಡುತ್ತಿದ್ದಾರೆ. ಅವರ ಸೇವೆಯನ್ನು ಗುರುತಿಸಿ ಗೌರವಿಸುವುದು ಶ್ಲಾಘನೀಯ. ಅದರಲ್ಲೂ ಮಾಳಿಂಗರಾಯ ಪೂಜಾರ ಅವರು ತಮ್ಮ ಜನ್ಮದಿನವನ್ನು ಪತ್ರಿಕೆ ಹಂಚುವ ಮಕ್ಕಳಿಗೆ ಓದಿಗೆ ಸಹಾಯವಾಗುವ ನೋಟ್‌ಬುಕ್ ಹಾಗೂ ಪೆನ್‌ಬಾಕ್ಸ್ ವಿತರಿಸುವ ಮೂಲಕ ಆಚರಿಸಿಕೊಳ್ಳುತ್ತಿರುವುದು ಮಾದರಿಯಾಗಿದೆ ಎಂದರು.

ಗ್ಯಾರಂಟಿ ಸಮಿತಿ ತಾಲೂಕು ಅಧ್ಯಕ್ಷ ನಾಗರಾಜ ಮಡಿವಾಳರ ಮಾತನಾಡಿ, ಸುದ್ದಿಮನೆ ಮತ್ತು ಓದುಗರ ನಡುವಿನ ಜೀವಂತ ಕೊಂಡಿಯಾಗಿ ಕಾರ್ಯನಿರ್ವಹಿಸುವ ಶ್ರಮಜೀವಿ ಪತ್ರಿಕಾ ವಿತರಕರಿಗೆ ಗೌರವ ಸಲ್ಲಿಸುವ ಕಾರ್ಯ ಶ್ಲಾಘನೀಯವಾಗಿದೆ ಎಂದರು.

ಈ ಸಂದರ್ಭದಲ್ಲಿ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಅಶೋಕ ಸೊರಟೂರ, ರಾಮಣ್ಣ ಲಮಾಣಿ (ಶಿಗ್ಲಿ), ನೀಲಪ್ಪ ಪೂಜಾರ, ದಿಗಂಬರ ಪೂಜಾರ, ಶಿವಲಿಂಗಯ್ಯ ಹೊತಗಿಮಠ, ಸಾಧಿಕ ಮಿರ್ಜಾ, ನಿಂಗಪ್ಪ ಪೂಜಾರ, ಹನಮಂತಪ್ಪ ಬನ್ನಿ, ಬೀರಪ್ಪ ಪೂಜಾರ, ಹಣಮಂತ ಉಳ್ಳಟ್ಟಿ, ಶಿವಪ್ಪ ಪೂಜಾರ, ಸತ್ಯಪ್ಪ ಉಳ್ಳಟ್ಟಿ, ದೇವಪ್ಪ ಪೂಜಾರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಪತ್ರಕರ್ತರಾದ ನಾಗರಾಜ ಹಣಗಿ ಹಾಗೂ ಮಾಳಿಂಗರಾಯ ಪೂಜಾರ ಕಾರ್ಯಕ್ರಮ ನಿರ್ವಹಿಸಿದರು.

## ಪ.ಜಾ.-ಪ.ಪ. ನೌಕರರ ಸಂಘಕ್ಕೆ ನೂತನ ಪದಾಧಿಕಾರಿಗಳ ಆಯ್ಕೆ



**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ರಾಜ್ಯ ಸಮಾಜ ಕಲ್ಯಾಣ ಇಲಾಖಾ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗಗಳ ನೌಕರರ ಕೇಂದ್ರ ಸಂಘ (ರಿ.), ಬೆಂಗಳೂರು, ಇದರ ಗದಗ ಜಿಲ್ಲಾ ಘಟಕದ ಪುನರ್ ರಚನೆ ಕಾರ್ಯಕ್ರಮ ನಗರದ ಅಂಬೇಡ್ಕರ್ ಭವನದಲ್ಲಿ ಸೆ.6ರಂದು ನಡೆಯಿತು.

ಕಾರ್ಯಕ್ರಮದಲ್ಲಿ ಸಮಾಜ ಕಲ್ಯಾಣ ಇಲಾಖೆ ಗದಗದ ಉಪನಿರ್ದೇಶಕಿ ಡಾ. ನಂದಾ ಹಣಬರಟ್ಟಿ ಗೌರವಾಧ್ಯಕ್ಷರಾಗಿ ಪಾಲ್ಗೊಂಡು, ನೂತನ ಪದಾಧಿಕಾರಿಗಳಿಗೆ ಸಂಘಟನೆಯ ಜವಾಬ್ದಾರಿ ಹಾಗೂ ಕರ್ತವ್ಯಗಳ ಕುರಿತು ಮಾರ್ಗದರ್ಶನ ನೀಡಿದರು.

ವಿಶೇಷ ಆಹ್ವಾನಿತರಾಗಿ ರಾಜ್ಯ ಪ್ರಧಾನ ಕಾರ್ಯದರ್ಶಿ ಗೋವಿಂದರೆಡ್ಡಿ ಹಾಗೂ ಬೆಳಗಾವಿ ವಿಭಾಗದ ಕಾರ್ಯಾಧ್ಯಕ್ಷ, ಸಹಾಯಕ ನಿರ್ದೇಶಕ ಬಸವರಾಜ ಚನ್ನಯ್ಯ ಪಾಲ್ಗೊಂಡು, ಸಂಘಟನೆಯ ಉದ್ದೇಶ, ಕಾರ್ಯವೈಖರಿ ಹಾಗೂ ಸಮಾಜ ಕಲ್ಯಾಣ ಇಲಾಖೆಯಿಂದ ಸಾರ್ವಜನಿಕರಿಗೆ ದೊರೆಯಬೇಕಾದ ಸೌಲಭ್ಯಗಳನ್ನು ತಲುಪಿಸುವಲ್ಲಿ ಸಂಘದ ಪಾತ್ರದ ಕುರಿತು ಮಾತನಾಡಿದರು.

ಪುನರ್ ರಚನೆಯಾದ ಗದಗ ಜಿಲ್ಲಾ ಘಟಕಕ್ಕೆ ಬಾಲಚಂದ್ರ ಸಂಗನಾಳ ಅಧ್ಯಕ್ಷರಾಗಿ, ಗೋಪಾಲ ಲಮಾಣಿ, ಚಂದ್ರಕಾಂತ ವಡ್ಡರಕಲ್ಲ ಹಾಗೂ ವಸಂತ ಲಮಾಣಿ ಉಪಾಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ. ವಿಶಾಲ ಅಶೋಕ ಹಾದಿಮನಿ ಪ್ರಧಾನ ಕಾರ್ಯದರ್ಶಿಯಾಗಿ, ವೆಂಕಟೇಶ ದ್ವಾಸಲಕೇರಿ ಕಾರ್ಯಾಧ್ಯಕ್ಷರಾಗಿ, ರಾಘವೇಂದ್ರ ಗೋಕಾಕ ಖಜಾಂಚಿ-ಯಾಗಿ ಹಾಗೂ ಸವಿತಾ ಮೇತ್ರಿ ಸಂಘಟನಾ ಕಾರ್ಯದರ್ಶಿಯಾಗಿ ಆಯ್ಕೆಯಾಗಿದ್ದಾರೆ. ಕುಬೇರ ಲಮಾಣಿ ಹಾಗೂ ಎಲ್.ಎಂ. ಗಚ್ಚಿಮನಿ ಸಹ ಕಾರ್ಯದರ್ಶಿಗಳಾಗಿ ಆಯ್ಕೆಯಾಗಿದ್ದು, ಜಿಲ್ಲಾ ಕಾರ್ಯಕಾರಿ ಸಮಿತಿ ಸದಸ್ಯರಾಗಿ ಈಶ್ವರ ಲೋಕಾಪುರ, ನವೀನಕುಮಾರ್ ಹರಿಜನ, ವೆಂಕಟೇಶ ಪೂಜಾರ, ವಾಯ್.ಡಿ. ದೊಡ್ಡಮನಿ, ಮಂಜುಳಾ ಅರಳಿಗಿಡದ, ಹೇಮಾವತಿ ಗೂಗಲೋತ್ರ ಹಾಗೂ ರೇಣುಕರಾಜ ಹ-ರಿಜನ ಆಯ್ಕೆಯಾಗಿದ್ದಾರೆ ಎಂದು ಅಧ್ಯಕ್ಷ ಬಾಲಚಂದ್ರ ಸಂಗನಾಳ ತಿಳಿಸಿದ್ದಾರೆ.

## ನೂತನ ಎಸ್‌ಪಿಗೆ ಜೈ ಭೀಮ ಸಂಘರ್ಷ ಸಮಿತಿಯಿಂದ ಸನ್ಮಾನ



**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ನೂತನ ಪೊಲೀಸ್ ವರಿಷ್ಠಾಧಿಕಾರಿಯಾಗಿ ಅಧಿಕಾರ ಸ್ವೀಕರಿಸಿದ ಮಿಥುನ್ ಎಚ್.ಎನ್. ಅವರನ್ನು ಜೈ ಭೀಮ ರಾಜ್ಯ ಸಂಘರ್ಷ ಸಮಿತಿ ಗದಗ ಜಿಲ್ಲಾ ಘಟಕದ ವತಿಯಿಂದ ಗೌರವಿಸಿ ಸನ್ಮಾನಿಸಲಾಯಿತು.

ಸಮಿತಿಯ ಜಿಲ್ಲಾಧ್ಯಕ್ಷ ಗಣೇಶ ವಾಯ್. ಹುಬ್ಬಳ್ಳಿ ಅವರ ನೇತೃತ್ವದಲ್ಲಿ ಎಸ್‌ಪಿ ಎಚ್.ಎನ್. ಮಿಥುನ್ ಅವರಿಗೆ ಶಾಲು ಹೊದಿಸಿ, ಡಾ. ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರ ನೀಡಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಡಿಎಸ್‌ಎಸ್ ಮಹಿಳಾ ಮುಖಂಡೆ ಪೂಜಾ ಬೇವೂರ, ಜೈ ಭೀಮ ರಾಜ್ಯ ಸಂಘರ್ಷ ಸಮಿತಿ ಉಪಾಧ್ಯಕ್ಷ ಮಂಜುನಾಥ ಎಫ್. ತೌಜಲ್, ರೋಣ ತಾಲೂಕು ಅಧ್ಯಕ್ಷ ಬಸವರಾಜ ಬದಾಮಿ, ಅಲ್ಪಸಂಖ್ಯಾತರ ಘಟಕದ ಜಿಲ್ಲಾಧ್ಯಕ್ಷ ರಾಷ್ಟ್ರಿನ್ ಜೋಸೆಫ್, ಉಪಾಧ್ಯಕ್ಷ ರಾಜೇಶ ವಿ. ಶೆಟ್ಟರ್, ಅಲ್ಪಸಂಖ್ಯಾತರ ಯುವ ಘಟಕದ ಜಿಲ್ಲಾಧ್ಯಕ್ಷ ಇಮಾಮಹುಸೇನ ಕುನ್ನಿಬಾವಿ, ಕಾರ್ಯದರ್ಶಿ ಸಮೀರಅಹ್ಮದ ಕುನ್ನಿಬಾವಿ, ಬಾಬು ಬಳ್ಳಾರಿ, ಮಂಜುನಾಥ ಸಂದಿಮನಿ, ಪ್ರೇಮಕುಮಾರ ಹುಬ್ಬಳ್ಳಿ, ಮಂಜುನಾಥ ಸುಂಕದ, ಶ್ರೀಕಾಂತ ಹಲವಾಗಲಿ, ಹೇಮಂತ ಹುಬ್ಬಳ್ಳಿ, ವಿರುಪಾಕ್ಷ ಗೌಡರ, ಗಿರೀಶ ಚಳಗೇರಿ, ರಫೀಕ ನವಲಗುಂದ, ಫರದೀನ ಕಾಟಾಪುರ ಹಾಗೂ ಮಲ್ಲೇಶ ಮೇಳದಾಳಮಠ ಉಪಸ್ಥಿತರಿದ್ದರು.

ಸಂಕ್ಷಿಪ್ತ ಸುದ್ದಿಗಳು

## ಸಂಸ್ಕಾರ ರೂಪಿಸುವುದೇ ಶಿಕ್ಷಣ: ಸವಿತಾ ಕಮ್ಮಾರ



ವಿಜಯಸಾಕ್ಷಿ ಸುದ್ದಿ, ಅಣ್ಣಿಗೇರಿ

ಮಾತೋಶ್ರೀ ವಿದ್ಯಾ ಸಂಸ್ಥೆಯ ರೇನ್‌ಬೋ ಆಂಗ್ಲ ಮಾಧ್ಯಮ ಪ್ರಾಥಮಿಕ ಶಾಲೆಯಲ್ಲಿ 138ನೇ ಶಿಕ್ಷಕರ ದಿನಾಚರಣೆಯನ್ನು ಸಂಭ್ರಮದಿಂದ ಆಚರಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಅಧ್ಯಕ್ಷ ಬಿ.ಎ. ಬಂದೋಜಿ ಮಾತನಾಡಿ, ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರು ಮಹಾನ್ ತತ್ವಜ್ಞಾನಿ ಹಾಗೂ ಉತ್ತಮ ರಾಷ್ಟ್ರಪತಿಯಾಗಿದ್ದರು. ವಿದ್ಯಾರ್ಥಿಗಳು ಅವರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡು, ಶಿಕ್ಷಕರ ಮಾರ್ಗದರ್ಶನವನ್ನು ಶ್ರದ್ಧೆಯಿಂದ ಪಾಲಿಸಬೇಕು ಎಂದರು.

ಮುಖ್ಯೋಪಾಧ್ಯಾಯಿನಿ ಸವಿತಾ ಕಮ್ಮಾರ ಮಾತನಾಡಿ, ಶಿಕ್ಷಣವೆಂದರೆ ಕೇವಲ ಅಂಕ ಗಳಿಸುವುದಲ್ಲ, ವಿದ್ಯಾರ್ಥಿಗಳಲ್ಲಿ ಉತ್ತಮ ಸಂಸ್ಕಾರ, ನಡವಳಿಕೆ, ಸೃಜನಶೀಲತೆ ಹಾಗೂ ಮಾನವೀಯ ಮೌಲ್ಯಗಳನ್ನು ಬೆಳೆಸುವುದಾಗಿದೆ. ಶಿಕ್ಷಕರು ಸಮರ್ಪಣಾ ಮನೋಭಾವದಿಂದ ಕಾರ್ಯನಿರ್ವಹಿಸಿದಾಗ ವಿದ್ಯಾರ್ಥಿಗಳ ಪ್ರಗತಿ ಸಾಧ್ಯ ಎಂದರು. ಭಾರತದ ಮೊದಲ ಮಹಿಳಾ ಶಿಕ್ಷಕಿ ಸಾವಿತ್ರಿಬಾಯಿ ಫುಲೆ ಅವರ ಜೀವನ ಹಾಗೂ ಶಿಕ್ಷಕ ವೃತ್ತಿಯ ಮಹತ್ವವನ್ನು ತಿಳಿಸಿದರು.

ಸಹಶಿಕ್ಷಕಿ ಫಾತಿಮಾ ದೊಡ್ಡಮನಿ ಮಾತನಾಡಿ, ಶಿಕ್ಷಕರು ವಿದ್ಯಾರ್ಥಿಗಳ ಜೀವನ ರೂಪಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತಾರೆ. ವಿದ್ಯಾರ್ಥಿಗಳು ಶಿಕ್ಷಕರ ಮಾರ್ಗದರ್ಶನ ಪಡೆದು ಶಿಕ್ಷಣದ ಜತೆಗೆ ಕೌಶಲ್ಯ ಬೆಳೆಸಿಕೊಳ್ಳಬೇಕು ಎಂದರು.

ವಿದ್ಯಾರ್ಥಿಗಳು ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಜೀವನ, ಸಾಧನೆ ಹಾಗೂ ಆದರ್ಶಗಳ ಕುರಿತು ಅನಿಸಿಕೆ ಹಂಚಿಕೊಂಡರು.

ಆಡಳಿತ ಮಂಡಳಿ ಸದಸ್ಯರು, ಶಿಕ್ಷಕಿಯರಾದ ರಿಯಾನಾ, ಫಾತಿಮಾ, ದೀಪ, ರೇಖಾ, ರೇಣುಕಾ, ಸೌಮ್ಯಾ, ಸೃಷ್ಟಿ ಹಾಗೂ ಬೋಧಕೇತರ ಸಿಬ್ಬಂದಿ ಉಪಸ್ಥಿತರಿದ್ದರು.

## ರಾಧಾ-ಕೃಷ್ಣ ವೇಷದಲ್ಲಿ ಮಕ್ಕಳ ಕಲರವ




ವಿಜಯಸಾಕ್ಷಿ ಸುದ್ದಿ, ಗದಗ

ಪ್ರಕಲ್ಪ ಶಿಕ್ಷಣ ಸಂಸ್ಥೆಯಲ್ಲಿ ಕೃಷ್ಣ ಜನ್ಮಾಷ್ಟಮಿ ಅಂಗವಾಗಿ ಮಕ್ಕಳಿಗೆ ರಾಧಾ-ಕೃಷ್ಣರ ವೇಷಭೂಷಣ ಸ್ಪರ್ಧೆ ಹಾಗೂ ವಿಶೇಷ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಮಕ್ಕಳಿಗೆ ಬಾಲಕೃಷ್ಣ ಹಾಗೂ ರಾಧೆಯ ವೇಷ ಧರಿಸುವ ಮೂಲಕ ನಮ್ಮ ಧಾರ್ಮಿಕ, ಸಾಂಸ್ಕೃತಿಕ ಪರಂಪರೆಯ ಪರಿಚಯ ಮಾಡಿಸುವುದು ಕಾರ್ಯಕ್ರಮದ ಉದ್ದೇಶವಾಗಿತ್ತು. ಭಕ್ತಿ ಮತ್ತು ಗೌರವದಿಂದ ಆಚರಿಸುವ ಇಂತಹ ಸಂಪ್ರದಾಯಗಳು ಮಕ್ಕಳಲ್ಲಿ ಧರ್ಮ, ಸಂಸ್ಕೃತಿ ಹಾಗೂ ಪರಂಪರೆಯ ಬಗ್ಗೆ ಗೌರವ ಬೆಳೆಸುತ್ತವೆ ಎಂದು ಸಂಸ್ಥೆ ತಿಳಿಸಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಸ್ಥೆಯ ಸಂಸ್ಥಾಪಕ ಎಸ್.ವಿ. ಹುಬ್ಬಳ್ಳಿ ವಹಿಸಿದ್ದರು. ಮಾರ್ಗದರ್ಶಕಿ ಎಸ್.ಎನ್. ಹುಬ್ಬಳ್ಳಿ, ಕಾರ್ಯದರ್ಶಿ ಪಿ.ಎಸ್. ಹುಬ್ಬಳ್ಳಿ ಸೇರಿದಂತೆ ಶಿಕ್ಷಕರು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು. ಸಹ ಶಿಕ್ಷಕಿ ಪುಷ್ಪ ಪಿ. ಮೇಗೇರಿ ನಿರೂಪಿಸಿದರು.

### ಕರ್ತವ್ಯಪ್ರಜ್ಞೆ, ಅಧ್ಯಯನಶೀಲತೆ ಹಾಗೂ ಹೊಸ ತಂತ್ರಜ್ಞಾನ ಅಳವಡಿಸಿಕೊಂಡು ಪರಿಣಾಮಕಾರಿ ಬೋಧನೆಗೆ ಮುಂದಾಗಿ: ಡಾ. ಚಂದ್ರು ಲಮಾಣಿ

# ಶಿಕ್ಷಕರೇ ರಾಷ್ಟ್ರ ನಿರ್ಮಾಣದ ಶಿಲ್ಪಿಗಳು



ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶಿಕ್ಷಕರು ಕೇವಲ ಪಾಠ ಬೋಧಿಸುವವರಲ್ಲ, ವಿದ್ಯಾರ್ಥಿಗಳಲ್ಲಿನ ಸುಪ್ತ ಪ್ರತಿಭೆಯನ್ನು ಗುರುತಿಸಿ, ಅವರ ಭವಿಷ್ಯ ರೂಪಿಸುವುದರ ಜತೆಗೆ ದೇಶದ ಸತ್ಪ್ರಜೆಗಳನ್ನು ನಿರ್ಮಿಸುವ ಮಹತ್ತರ ಜವಾಬ್ದಾರಿ ಹೊಂದಿರುವ ರಾಷ್ಟ್ರ ನಿರ್ಮಾತೃಗಳು ಎಂದು ಮುಕ್ತಿಮಂದಿರ ಧರ್ಮಕ್ಷೇತ್ರದ ಶ್ರೀ ವಿಮಲ ರೇಣುಕ ವೀರ ಮುಕ್ತಿಮುನಿ ಶಿವಾಚಾರ್ಯರು ಹೇಳಿದರು.

ಪಟ್ಟಣದ ಶ್ರೀ ವೀರ ಗಂಗಾಧರ ಕಲ್ಯಾಣ ಮಂಟಪದಲ್ಲಿ ಜಿಪಂ, ತಾಲೂಕಾಡಳಿತ ಹಾಗೂ ಶಿರಹಟ್ಟಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ಸಹಯೋಗದಲ್ಲಿ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ 138ನೇ ಜನ್ಮದಿನದ ಅಂಗವಾಗಿ ಆಯೋಜಿಸಿದ್ದ ಲಕ್ಷ್ಮೇಶ್ವರ-ಶಿರಹಟ್ಟಿ ತಾಲೂಕು ಮಟ್ಟದ ಶಿಕ್ಷಕರ ದಿನಾಚರಣೆ ಹಾಗೂ ನಿವೃತ್ತ ಶಿಕ್ಷಕರ ಸನ್ಮಾನ ಸಮಾರಂಭದ ಸಾನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ಹಿಂದೆ ಶಾಲೆಗಳನ್ನು 'ಸಾಲಿಗುಡಿ' ಎಂದು ಗೌರವಿಸಲಾಗುತ್ತಿತ್ತು. ಆ ಪರಂಪರೆಯ ಮಹತ್ವವನ್ನು ಅರಿತು ಶಿಕ್ಷಕರು ಕಾರ್ಯನಿರ್ವಹಿಸಬೇಕು. ಸಮಾಜದಲ್ಲಿನ ಮೌಢ್ಯ, ಅಂಧಕಾರ ಹಾಗೂ ಮೂಢನಂಬಿಕೆಗಳನ್ನು ಹೋಗಲಾಡಿಸಿ ಸ್ವಸ್ಥ ಸಮಾಜ ನಿರ್ಮಾಣಕ್ಕೆ ಶಿಕ್ಷಕರು ಶ್ರಮಿಸಬೇಕು. ಮಕ್ಕಳು ಹಾಗೂ ಸಮಾಜ ನೀಡುವ ಗೌರವವೇ ಶಿಕ್ಷಕರಿಗೆ ದೊರೆಯುವ ಶ್ರೇಷ್ಠ ಪ್ರಶಸ್ತಿ ಎಂದರು.

ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರು ಶಿಕ್ಷಕ, ತತ್ವಜ್ಞಾನಿ ಹಾಗೂ ರಾಜಕಾರಣಿಯಾಗಿ ದೇಶಕ್ಕೆ ಮಾದರಿಯಾಗಿದ್ದರು. ನಮ್ಮ ನೆಲದಲ್ಲಿ ನಡೆದಾಡಿದ ದೇವರೆಂದೇ ಗೌರವಿಸಲ್ಪಟ್ಟ ಲಿಂ. ವೀರ ಗಂಗಾಧರ ಜಗದ್ಗುರುಗಳು ಡಾ. ರಾಧಾಕೃಷ್ಣನ್ ಅವರನ್ನು ರಾಷ್ಟ್ರಪತಿ ಭವನದಲ್ಲಿಈ ಗೌರವಿಸಿದ್ದು ನಮ್ಮ ನೆಲದ ಹೆಮ್ಮೆ ಎಂದರು.

> ಶಿಕ್ಷಕರು ಕೇವಲ ಪಾಠ ಹೇಳುವವರಲ್ಲ, ವಿದ್ಯಾರ್ಥಿಗಳಲ್ಲಿರುವ ಸುಪ್ತ ಶಕ್ತಿಯನ್ನು ಗುರುತಿಸಿ, ಅವರನ್ನು ಉತ್ತಮ ನಾಗರಿಕರನ್ನಾಗಿ ರೂಪಿಸುವ ಮೂಲಕ ರಾಷ್ಟ್ರದ ಭವಿಷ್ಯ ಕಟ್ಟುವ ಮಹಾನ್ ಶಿಲ್ಪಿಗಳು.
> - ಶ್ರೀ ವಿಮಲ ರೇಣುಕ ವೀರ ಮುಕ್ತಿಮುನಿ ಶಿವಾಚಾರ್ಯರು

ಸಮಾರಂಭದ ಅಧ್ಯಕ್ಷತೆ ವಹಿಸಿ ಉದ್ಘಾಟಿಸಿದ ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, ಶಿಕ್ಷಕರ ಕೊರತೆ ಹಾಗೂ ಸೀಮಿತ ಸೌಲಭ್ಯಗಳ ನಡುವೆಯೂ ಶಿರಹಟ್ಟಿ ಮತಕ್ಷೇತ್ರದಲ್ಲಿ ಶಿಕ್ಷಕರ ಪ್ರಾಮಾಣಿಕ ಸೇವೆಯಿಂದ ಉತ್ತಮ ಶೈಕ್ಷಣಿಕ ಸಾಧನೆ ಮಾಡಿರುವುದು ಶ್ಲಾಘನೀಯ ಎಂದರು.

ಶಿಕ್ಷಕರು ಕರ್ತವ್ಯಪ್ರಜ್ಞೆ, ನಿರಂತರ ಅಧ್ಯಯನಶೀಲತೆ ಹಾಗೂ ಹೊಸ ತಂತ್ರಜ್ಞಾನವನ್ನು ಅಳವಡಿಸಿಕೊಂಡು ಪರಿಣಾಮಕಾರಿ ಬೋಧನೆಗೆ ಮುಂದಾಗಬೇಕು. ಮಕ್ಕಳ ಭವಿಷ್ಯದ ಜತೆಗೆ ದೇಶದ ಭವಿಷ್ಯ ರೂಪಿಸುವ ಶಕ್ತಿ ಶಿಕ್ಷಕರಲ್ಲಿದೆ. ಕ್ಷೇತ್ರದ ಶಾಲೆಗಳಿಗೆ ಅಗತ್ಯ ಮೂಲಸೌಕರ್ಯ ಕಲ್ಪಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತಿದ್ದೇನೆ ಎಂದರು.

ಪ್ರತಿವರ್ಷ ಶಿಕ್ಷಕರ ದಿನಾಚರಣೆಯಂದೇ ನಿವೃತ್ತ ಶಿಕ್ಷಕರಿಗೆ ಸನ್ಮಾನದ ಜತೆಗೆ ಪಿಂಚಣಿ ಸೌಲಭ್ಯ ಒದಗಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಬೇಕು. ಒಪಿಎಸ್ ಜಾರಿ ಸೇರಿದಂತೆ ಶಿಕ್ಷಕರ ವಿವಿಧ ಸಮಸ್ಯೆಗಳ ಪರಿಹಾರ ಹಾಗೂ ನ್ಯಾಯಯುತ ಬೇಡಿಕೆಗಳಿಗೆ ಧ್ವನಿಯಾಗಿ ನಿಲ್ಲುವುದಾಗಿ ಭರವಸೆ ನೀಡಿದರು.

ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ಶಿಕ್ಷಕರು ತಮ್ಮ ವೃತ್ತಿಪರ ಪ್ರಾಮಾಣಿಕತೆಯ ಆತ್ಮಾವಲೋಕನ ಮಾಡಿಕೊಂಡು ನಿರಂತರ ಅಧ್ಯಯನಶೀಲ, ಅನುಕರಣೀಯ ಹಾಗೂ ಕೌಶಲ್ಯವಂತರಾಗಬೇಕು. ದೇಶದ ಸರ್ವತೋಮುಖ ಬೆಳವಣಿಗೆಗೆ ಪೂರಕವಾಗಿ ಸೇವೆ ಸಲ್ಲಿಸುವ ಶಿಕ್ಷಕರಿಗೆ ಸರ್ಕಾರದ ಕೆಲ ನೀತಿಗಳು ಮಾರಕವಾಗಿ ಪರಿಣಮಿಸುತ್ತಿವೆ ಎಂದರು.

ಮಾಜಿ ಶಾಸಕ ಜಿ.ಎಂ. ಮಹಾಂತಶೆಟ್ಟರ ಮಾತನಾಡಿ, ಖಾಸಗಿ ಶಾಲೆಗಳಲ್ಲಿ ಮಕ್ಕಳ ಸಂಖ್ಯೆ ಹೆಚ್ಚುತ್ತಿದ್ದರೆ, ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ಸಂಖ್ಯೆ ಕ್ಷೀಣಿಸುತ್ತಿದೆ. ಈ ಬೆಳವಣಿಗೆಯನ್ನು ಗಂಭೀರವಾಗಿ ಪರಿಗಣಿಸಿ ಸರ್ಕಾರ ಸರ್ಕಾರಿ ಶಾಲೆಗಳತ್ತ ಹೆಚ್ಚಿನ ಗಮನ ಹರಿಸಬೇಕು ಎಂದರು.



ಬಿಇಒ ಶಿವರಾಜ ಶಿಮಿಕೇರಿ ಪ್ರಾಸ್ತಾವಿಕವಾಗಿ ಮಾತನಾಡಿ, ಅಗಡಿ ಫೌಂಡೇಶನ್ ವತಿಯಿಂದ ಲಕ್ಷ್ಮೇಶ್ವರದ ಸರ್ಕಾರಿ ಶಾಲೆ ನಂ.1ರ ಮೂಲಸೌಕರ್ಯ ಅಭಿವೃದ್ಧಿಗೆ 50 ಲಕ್ಷ ದೇಣಿಗೆ ನೀಡಿರುವುದನ್ನು ಸ್ಮರಿಸಿದರು. ಹರಿಹರದ ಹಿರಿಯ ಸಾಹಿತಿ ಪ್ರೊ. ಎಚ್.ಎ. ಭಿಕ್ಷಾವರ್ತಿಮಠ ಉಪನ್ಯಾಸ ನೀಡಿದರು.

ಮಾಜಿ ಶಾಸಕ ರಾಮಣ್ಣ ಲಮಾಣಿ, ಗ್ಯಾರಂಟಿ ಸಮಿತಿ ಅಧ್ಯಕ್ಷ ವೀರಯ್ಯ ಮಠಪತಿ ಹಾಗೂ ನಾಗರಾಜ ಮಡಿವಾಳರ ಮಾತನಾಡಿದರು.

ಸಮಾರಂಭದಲ್ಲಿ ಲಕ್ಷ್ಮೇಶ್ವರ ಹಾಗೂ ಶಿರಹಟ್ಟಿ ತಾಲೂಕಿನ 50ಕ್ಕೂ ಹೆಚ್ಚು ನಿವೃತ್ತ ಶಿಕ್ಷಕರನ್ನು ಸನ್ಮಾನಿಸಿ ಗೌರವಿಸಲಾಯಿತು. ಶಿಕ್ಷಣ ಇಲಾಖೆಯಲ್ಲಿ ಸೇವೆ ಸಲ್ಲಿಸಿ ನಿಧನರಾದವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು. ವೇದಿಕಾ ಭರತನಾಟ್ಯ ಶಾಲೆಯ ವಿದ್ಯಾರ್ಥಿಗಳು ಭರತನಾಟ್ಯ ಪ್ರದರ್ಶಿಸಿದರು.

ಒಡೆಯರ ಮಲ್ಲಾಪುರ ಎಂಡಿಆರ್‌ಎಸ್ ಶಾಲೆಯ ವಿದ್ಯಾರ್ಥಿಗಳು ನಾಡಗೀತೆ, ಮಲ್ಲು ಕಳಸಾಪುರ ರೈತಗೀತೆ ಹಾಡಿದರು.

ಶಿಕ್ಷಣ ಸಂಯೋಜಕ ಆರ್.ಬಿ. ಜೋಶಿ, ನೌಕರರ ಸಂಘದ ಅಧ್ಯಕ್ಷ ಗುರುರಾಜ ಹವಳದ, ಹೆಚ್.ಎಸ್. ರಾಮನಗೌಡ್ರ, ಎಸ್.ಕೆ. ಹವಾಲ್ದಾರ, ಮಂಜುನಾಥ ಕೊಕ್ಕರಗುಂದಿ, ನಾಗರಾಜ ಲಕ್ಕುಂಡಿ, ಬಿ.ಎಂ. ಕುಂಬಾರ, ಉಮೇಶ ನೇಕಾರ, ಶ್ರೀಕಾಂತ ನಂದೆಣ್ಣವರ, ಹೆಚ್.ಎಂ. ಸೊಪ್ಪಿನ, ಎಸ್.ಎಫ್. ಮಠದ, ಪರಪ್ಪ ಕರಿಗಾರ, ಜಿ.ಎನ್. ಕೋಡಬಾಳ, ಮೋಹನ ಮಾಂಡ್ರೆ, ಸುನಂದಾ ಹಿರೇಮಠ, ಮುತ್ತಣ್ಣ ಹುಬ್ಬಳ್ಳಿ, ಗೀತಾ ಹಳ್ಳಿಯಾಳ, ಎಸ್.ಎಫ್. ತಳವಾರ, ನವೀನ ಅಂಗಡಿ, ವಾಸು ದೀಪಾಲಿ, ಶ್ರೀನಿವಾಸ ಮತ್ತೂರ, ಎಲ್.ಎಸ್. ಅರಳಹಳ್ಳಿ ಸೇರಿದಂತೆ ಎರಡೂ ತಾಲೂಕಿನ ಶಿಕ್ಷಕರು, ವಿವಿಧ ಶಿಕ್ಷಕರ ಸಂಘಟನೆಗಳ ಪದಾಧಿಕಾರಿಗಳು ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.

ಶಿಕ್ಷಕರ ಸಂಘದ ಎಂ.ಎನ್. ಭರಮಗೌಡ್ರ ಸ್ವಾಗತಿಸಿದರು. ಶಿಕ್ಷಕರಾದ ಎಚ್.ಡಿ. ನಿಂಗರಡ್ಡಿ, ರತ್ನಾ ಕುಂಬಾರ, ಎನ್.ಎನ್. ಶಿಗ್ಲಿ ಹಾಗೂ ಶ್ರೀಪಾಲ್ ಘೋಂಗಡಿ ನಿರೂಪಿಸಿದರು. ಶರಣಬಸವಗೌಡ ಪಾಟೀಲ ವಂದಿಸಿದರು.

## ಶಿಕ್ಷಕ ವ್ಯಕ್ತಿಯನ್ನು ಶಕ್ತಿಯನ್ನಾಗಿ ರೂಪಿಸುವ ಮಹಾನ್ ಶಿಲ್ಪಿ




ವಿಜಯಸಾಕ್ಷಿ ಸುದ್ದಿ, ಗದಗ

ಶಿಕ್ಷಕರು ಕೇವಲ ಪಾಠ ಮಾಡುವವರಲ್ಲ. ಅವರು ಜ್ಞಾನದ ದೀಪವಾಗಿದ್ದು, ವಿದ್ಯಾರ್ಥಿಗಳಲ್ಲಿನ ಸುಪ್ತ ಪ್ರತಿಭೆಯನ್ನು ಗುರುತಿಸಿ, ಅವರ ಗುರಿ ಸಾಧನೆಗೆ ಮಾರ್ಗದರ್ಶನ ನೀಡುವ ಮೂಲಕ ವ್ಯಕ್ತಿಯನ್ನು ಶಕ್ತಿಯನ್ನಾಗಿ ರೂಪಿಸುವ ಮಹಾನ್ ಶಿಲ್ಪಿಗಳು ಎಂದು ಕೆಎಲ್‌ಇ ಸಂಸ್ಥೆಯ ಜೆ.ಟಿ. ಮಹಾವಿದ್ಯಾಲಯದ ಪ್ರಾಚಾರ್ಯ ವಿಶ್ವನಾಥ ಜಿ. ಹೇಳಿದರು.

ಸಿದ್ಧಲಿಂಗ ನಗರದ ಬಸವ ಸಭಾ ಭವನದಲ್ಲಿ ಎಸ್‌ವೈಬಿಎಂಎಸ್ ಯೋಗಪಾಠಶಾಲೆಯ ಬಸವ ಯೋಗ ಮಹಾವಿದ್ಯಾಲಯದ ವತಿಯಿಂದ ಆಯೋಜಿಸಿದ್ದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಈ ಸಂದರ್ಭದಲ್ಲಿ ನಿವೃತ್ತ ರಾಜ್ಯ ಪ್ರಶಸ್ತಿ ಪುರಸ್ಕೃತ ಶಿಕ್ಷಕ ಜಿ.ಪಿ. ಕಟ್ಟಿಮನಿ, ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಅಧ್ಯಕ್ಷೆ ವಿಜಯಲಕ್ಷ್ಮೀ ಆನೆಹೊಸೂರ, ಬಸವ ಯೋಗ ಮಹಾವಿದ್ಯಾಲಯದ ಪ್ರಾಚಾರ್ಯ ಕೆ.ಎಸ್. ಪ್ಲೇದ ಹಾಗೂ ಯೋಗ ಸೇವಾ ಶಿಕ್ಷಕಿ ಜಯಶ್ರೀ ಡಾವಣಗೇರಿ ಉಪಸ್ಥಿತರಿದ್ದರು.

2026-27ನೇ ಸಾಲಿನ ಸರ್ಟಿಫಿಕೇಟ್ ಕೋರ್ಸ್ ಇನ್ ಯೋಗ ಸ್ಟಡೀಸ್ ಹಾಗೂ ಪಿ.ಜಿ. ಡಿಪ್ಲೋಮಾ ಇನ್ ಯೋಗ ಸ್ಟಡೀಸ್‌ಗೆ ಪ್ರವೇಶ ಪಡೆದ ವಿದ್ಯಾರ್ಥಿಗಳನ್ನು ಗ್ರಂಥ ಹಾಗೂ ಪುಷ್ಪ ನೀಡಿ ಸ್ವಾಗತಿಸಲಾಯಿತು. ವಿಶ್ವನಾಥ ಜಿ., ವನಿತಾ ವರ್ಣೇಕರ ಹಾಗೂ ಜಯಶ್ರೀ ಡಾವಣಗೇರಿ ಅವರನ್ನು ಶಿಕ್ಷಕರ ದಿನಾಚರಣೆ ಅಂಗವಾಗಿ ಸನ್ಮಾನಿಸಲಾಯಿತು.

ಡಾ. ನಾಗರಾಜ ಓ., ಅಶೋಕ ರೇವಣಕರ, ಆನಂದ ಬದಿ, ಕೆ.ಎಫ್. ಕುಂಬಾರ, ವಿಜಯಾ ಚನ್ನಶೆಟ್ಟಿ, ಶಾರದಾ ಇನಾಮತಿ, ಜಯಶ್ರೀ ವಸ್ತದ, ಅರುಣಾ ಇಂಗಳಳ್ಳಿ, ಶೋಭಾ ಭಾಂಡಗೆ, ಮಹಾದೇವಿ ಚರಂತಿಮಠ, ಅನ್ನಪೂರ್ಣ ಅಸೂಟಿ, ಸುಲೋಚನಾ ಐಹೊಳ್ಳಿ, ಸುಮಾ ಸುರೇಬಾನ, ಗಿರಿಜಾ ಅಂಗಡಿ, ಸುಲೋಚನಾ ಕಾಲವಾಡಮಠ ಸೇರಿದಂತೆ ಗಣ್ಯರು ಪಾಲ್ಗೊಂಡಿದ್ದರು.

ಆನಂದ ಬದಿ ಸ್ವಾಗತಿಸಿದರು. ಕೆ.ಎಸ್. ಪ್ಲೇದ ಪ್ರಾಸ್ತಾವಿಕವಾಗಿ ಮಾತನಾಡಿದರು. ಡಾ. ಎಂ.ವಿ. ಐಹೊಳ್ಳಿ ವಂದಿಸಿದರು. ನಿವೃತ್ತ ಮುಖ್ಯೋಪಾಧ್ಯಾಯ ಶಿವನಗೌಡ ಗೌಡರ ನಿರೂಪಿಸಿದರು. ಆರಂಭದಲ್ಲಿ ಸಾಮೂಹಿಕ ಗುರು ಪ್ರಾರ್ಥನೆ ನೆರವೇರಿಸಲಾಯಿತು.

## ಕತ್ತಲಲ್ಲಿ ಹುಟ್ಟಿ ಜಗತ್ತಿಗೆ ಬೆಳಕು ನೀಡಿದ ಶ್ರೀಕೃಷ್ಣ: ದತ್ತಣ್ಣ ಜೋಶಿ




ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ಜಿಶ್ರೀಕೃಷ್ಣ ಪರಮಾತ್ಮನ ಜೀವನ ಹಾಗೂ ಭಗವದ್ಗೀತೆಯ ಸಂದೇಶಗಳು ಇಂದಿಗೂ ಮಾನವ ಬದುಕಿಗೆ ಮಾರ್ಗದರ್ಶಕವಾಗಿವೆ ಎಂದು ನಿವೃತ್ತ ಸೇನಾಧಿಕಾರಿ ದತ್ತಣ್ಣ ಜೋಶಿ ಹೇಳಿದರು.

ಗಾಂಧಿನಗರದ ಶ್ರೀಕೃಷ್ಣ ಮಂದಿರದಲ್ಲಿ ಕೃಷ್ಣ ಜನ್ಮಾಷ್ಟಮಿ ಪ್ರಯುಕ್ತ ಖಂಜರಭಾಟ ಸಮಾಜ ಹಾಗೂ ಸಾರ್ವಜನಿಕರ ನೇತೃತ್ವದಲ್ಲಿ ಆಯೋಜಿಸಿದ್ದ ಭಜನೆ, ಕೀರ್ತನೆ, ಸತ್ಸಂಗ ಹಾಗೂ ನೃತ್ಯ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮಥುರೆಯ ಕಂಸನ ಕಾರಾಗೃಹದ ಕತ್ತಲೆಯಲ್ಲಿ ಜನಿಸಿದ ಶ್ರೀಕೃಷ್ಣ, ಅಧರ್ಮದ ನಡುವೆ ಧರ್ಮದ ದೀಪವಾಗಿ ಉದಯಿಸಿದ ಮಹಾಪುರುಷ ಎಂದು ಭಕ್ತರು ನಂಬುತ್ತಾರೆ. ಅಜ್ಞಾನ ಮತ್ತು ಭಯದ ಕತ್ತಲೆಯ ವಿರುದ್ಧ ಬೆಳಕು ಮೂಡಿದ ಕ್ಷಣವನ್ನು ಜನ್ಮಾಷ್ಟಮಿ ಸಂದರ್ಭದಲ್ಲಿ ಸ್ಮರಿಸಲಾಗುತ್ತದೆ ಎಂದರು.

ಶ್ರೀಕೃಷ್ಣನ ಆಗಮನ ಕೇವಲ ಜನನದ ಕಥೆಯಲ್ಲ. ಅದು ಲೋಕಕ್ಕೆ ನೀತಿ, ಧೈರ್ಯ, ಸತ್ಯ ಹಾಗೂ ಧರ್ಮದ ಸಂದೇಶ ನೀಡಿದ ಮಹತ್ವದ ಘಟನೆ. ದೇವಕಿ-ವಸುದೇವರ ಸಂಕಷ್ಟ, ಕಂಸನ ದೌರ್ಜನ್ಯ ಹಾಗೂ ಅದರ ನಡುವೆಯೇ ಅರಳಿದ ದೈವಿಕ ಬೆಳಕು ಕೃಷ್ಣ ಜನ್ಮದ ತಾತ್ವಿಕ ಅರ್ಥವನ್ನು ಗಾಢಗೊಳಿಸುತ್ತದೆ ಎಂದರು.

ಪುರಾಣಗಳ ಪ್ರಕಾರ, ಜನನದ ಬಳಿಕ ವಸುದೇವರು ಶ್ರೀಕೃಷ್ಣನನ್ನು ಮಥುರೆಯಿಂದ ಗೋಕುಲಕ್ಕೆ ಕೊಂಡೊಯ್ದರು. ಪ್ರತಿಕೂಲ ಪರಿಸ್ಥಿತಿಯ ನಡುವೆಯೂ ನಡೆದ ಈ ಘಟನೆ ಧರ್ಮದ ಅಜೇಯತೆಯ ಸಂದೇಶ ಸಾರುತ್ತದೆ. ಧರ್ಮಸ್ಥಾಪನೆ, ಅಧರ್ಮನಾಶ ಹಾಗೂ ಕರ್ಮಯೋಗದ ಸಂದೇಶಗಳ ಮೂಲಕ ಶ್ರೀಕೃಷ್ಣ ಭಾರತೀಯ ಸಂಸ್ಕೃತಿಯಲ್ಲಿ ಅಜರಾಮರ ಸ್ಥಾನ ಪಡೆದಿದ್ದಾರೆ ಎಂದರು.

ಅಧ್ಯಾತ್ಮಿಕವಾಗಿ ಕತ್ತಲೆಯ ನಡುವೆ ಕೃಷ್ಣನ ಜನನವು ಬದುಕಿನಲ್ಲಿ ಎಂತಹ ಸಂಕಷ್ಟಗಳು ಎದುರಾದರೂ ಆಶೆ ಕಳೆದುಕೊಳ್ಳಬಾರದು ಎಂಬ ಸಂದೇಶ ನೀಡುತ್ತದೆ. ಅಂಧಕಾರ ಎಷ್ಟೇ ದಟ್ಟವಾಗಿದ್ದರೂ ಬೆಳಕು ಉದಯಿಸುವುದು ನಿಶ್ಚಿತ ಎಂಬ ನಂಬಿಕೆಯೇ ಈ ಕಥೆಯ ಕೇಂದ್ರಭಾವವಾಗಿದೆ ಎಂದರು.

ಡಿ.ಪಿ. ನವಲೇಕರ, ಮಂಜುನಾಥ ಬಾಗಡೆ ಹಾಗೂ ವಿಶ್ವಾಸ ಗಾಗಡೆ ಸತ್ಸಂಗ ಕಾರ್ಯಕ್ರಮ ನಡೆಸಿಕೊಟ್ಟರು. ವಿಶ್ವ ಹಿಂದೂ ಪರಿಷತ್ ಜಿಲ್ಲಾಧ್ಯಕ್ಷ ಮಾರುತಿ ಪವಾರ, ದೀಪಕ್ ಕುಲಕರ್ಣಿ, ದೀಪಕ್ ಗಾಗಡೆ, ಕೆ.ಎಸ್. ಹಿರೇಮಠ, ವೀರಣ್ಣ ಹೇಮಾದ್ರಿ, ವೀರೇಶ ಮಡಿವಾಳರ, ರಘುನಾಥ ಕೊಂಡಿ, ಕಿರಣ ನಾಯ್ಕರ, ಶ್ರೀನಿವಾಸ ಹುಬ್ಬಳ್ಳಿ ಸೇರಿದಂತೆ ಹಿರಿಯರು, ಮಾತೆಯರು ಹಾಗೂ ಮಕ್ಕಳು ಪಾಲ್ಗೊಂಡಿದ್ದರು.

## ವಿದ್ಯಾರ್ಥಿಗಳು ಸಮಯ ಸದುಪಯೋಗಪಡಿಸಿಕೊಳ್ಳಲಿ



ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ಜಗದ್ಗುರು ಶಿವಾನಂದ ಪದವಿಪೂರ್ವ ವಿಜ್ಞಾನ ಕಾಲೇಜಿನಲ್ಲಿ ಪಾಲಕರ ಸಭೆ ನಡೆಯಿತು.

ಸಭೆಯಲ್ಲಿ ಮಾತನಾಡಿದ ಪ್ರಾಚಾರ್ಯ ಎಸ್.ವಿ. ವರ್ಣೇಕರ, ಕಾಲೇಜು ಉತ್ತಮ ಫಲಿತಾಂಶ ನೀಡುತ್ತಾ ಬಂದಿದ್ದು, ಈ ವರ್ಷವೂ ಉತ್ತಮ ಫಲಿತಾಂಶ ನಿರೀಕ್ಷಿಸಲಾಗಿದೆ. ವಿದ್ಯಾರ್ಥಿಗಳು ವಿದ್ಯಾರ್ಜನೆಯಲ್ಲಿ ತೊಡಗಿ ತಮ್ಮ ಸಮಯವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಹೇಳಿದರು.

ಪಾಲಕರಾದ ರುದ್ರಪ್ಪ ಅಂಗಡಿ, ಆನಂದ ಹಂಚಿನಾಳ, ಹಾಲಮ್ಮ ಬ್ಯಾಲಿಹಾಳ ಹಾಗೂ ರೇಖಾ ಹೊಂಬಳ ಅವರು ತಮ್ಮ ಅಭಿಪ್ರಾಯ ಹಂಚಿಕೊಂಡರು. ಹಿರಿಯ ಉಪನ್ಯಾಸಕ ಎಂ.ಪಿ. ಮಂಟೂರ ಸ್ವಾಗತಿಸಿದರು. ಕನ್ನಡ ಉಪನ್ಯಾಸಕ ಎಸ್.ಬಿ. ಹಿರೇಮಠ ಪ್ರಾಸ್ತಾವಿಕವಾಗಿ ಮಾತನಾಡಿದರು.

ಗಣಕವಿಜ್ಞಾನ ಉಪನ್ಯಾಸಕ ಕೃಷ್ಣಪ್ರಸಾದ ಜಾಧವ ವಿದ್ಯಾರ್ಥಿಗಳು ಮೊಬೈಲ್ ಗೀಳಿನಿಂದ ದೂರವಿರುವಂತೆ ಸಲಹೆ ನೀಡಿದರು. ಭೌತಶಾಸ್ತ್ರ ಉಪನ್ಯಾಸಕಿ ಅಕ್ಷತಾ ಸೋಮನಕಟ್ಟಿ ವಿಷಯವಾರು ಅಧ್ಯಾಯಗಳತ್ತ ಹೆಚ್ಚಿನ ಗಮನ ಹರಿಸುವಂತೆ ತಿಳಿಸಿದರು. ಇಂಗ್ಲಿಷ್ ಉಪನ್ಯಾಸಕಿ ನಿಶಾದ ಯರಗುಡಿ ವಂದಿಸಿದರು. ಕಾಲೇಜಿನ ಎಲ್ಲ ಸಿಬ್ಬಂದಿ ಉಪಸ್ಥಿತರಿದ್ದರು.

## ಬಾಲ ವಿನಾಯಕ ಶಾಲೆಯಲ್ಲಿ ಶಿಕ್ಷಕರ ದಿನಾಚರಣೆ




ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಬಾಲ ವಿನಾಯಕ ವಿದ್ಯಾನಿಕೇತನ ಶಾಲೆಯಲ್ಲಿ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡುವ ಮೂಲಕ ಶಿಕ್ಷಕರ ದಿನಾಚರಣೆಯನ್ನು ಸಂಭ್ರಮದಿಂದ ಆಚರಿಸಲಾಯಿತು.

ಮುಖ್ಯ ಅತಿಥಿ ಶಿಕ್ಷಕ ಅಬ್ದುಲ್ ರೆಹಮಾನ್ ನಮಾಜಿ ಮಾತನಾಡಿ, ವಿದ್ಯಾರ್ಥಿಗಳು ಪಾಲಕರು ಒದಗಿಸುವ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಂಡು ಸತತ ಪರಿಶ್ರಮದಿಂದ ವಿದ್ಯಾಭ್ಯಾಸ ಮಾಡಿ ಜ್ಞಾನ ಸಂಪಾದಿಸಬೇಕು. ಗುರುಗಳು ವಿದ್ಯಾರ್ಥಿಗಳಿಂದ ಬಯಸುವ ಅತ್ಯುತ್ತಮ ಉಡುಗೊರೆ ಎಂದರೆ ಉತ್ತಮ ಫಲಿತಾಂಶದೊಂದಿಗೆ ಉಜ್ವಲ ಭವಿಷ್ಯ ರೂಪಿಸಿಕೊಳ್ಳುವುದು ಎಂದರು.

ಶಾಲೆಯ 9 ಮತ್ತು 10ನೇ ತರಗತಿಯ ವಿದ್ಯಾರ್ಥಿಗಳು ಶಿಕ್ಷಕರ ಪಾತ್ರವನ್ನು ವಹಿಸಿಕೊಂಡು ಅರ್ಧ ದಿನದ ತರಗತಿಗಳನ್ನು ನಡೆಸಿದ್ದು ಕಾರ್ಯಕ್ರಮದ ವಿಶೇಷವಾಗಿತ್ತು.

ಈ ಸಂದರ್ಭದಲ್ಲಿ ವಿದ್ಯಾರ್ಥಿಗಳಿಂದ ನೃತ್ಯ, ಶಿಕ್ಷಕರ ಕುರಿತ ಹಾಡು, ಕಿರು ನಾಟಕ ಸೇರಿದಂತೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು. ಜೀಯಾ ನಮಾಜಿ ಅತಿಥಿಗಳ ಪರಿಚಯ ಮಾಡಿದರು. ನವಿಶಾರದೆ ಗಣಾಚಾರಿ ಶಿಕ್ಷಕರ ದಿನಾಚರಣೆ ಕುರಿತು ಮಾತನಾಡಿದರು.

10ನೇ ತರಗತಿಯ ಯಾಷ್ವಿ ಪೇರೆರಾ ಹಾಗೂ ಸಂಗಡಿಗರು ನೃತ್ಯ ಪ್ರದರ್ಶಿಸಿದರು. ರಾಕೇಶ ಆನೆಗುಂದಿ ಹಾಗೂ ಸಂಗಡಿಗರು ಶಿಕ್ಷಕರ ಕುರಿತು ಹಾಡು ಹಾಡಿದರು. ಅರ್ಪಿತಾ ಕುಲಕರ್ಣಿ ಹಾಗೂ ಸಂಗಡಿಗರು ಕಿರು ನಾಟಕ ಪ್ರದರ್ಶಿಸಿದರು. ಶಾಲೆಯ ಪುಟ್ಟರಾಜ ಗವಾಯಿ ತಂಡದ ದೀಪಾ ಬೆಂತೂರ ಹಾಗೂ ಸಂಗಡಿಗರು ಪ್ರಾರ್ಥಿಸಿದರು.

ಗುರುಮಾತೆ ಸವಿತಾ ತುಕೋಳ ಉಡುಗೊರೆ ವಿತರಣೆ ನೆರವೇರಿಸಿದರು. ಮಾಹೀನ್ ನೀಲಿ ಸ್ವಾಗತಿಸಿದರು. ಶ್ರೇಯಾ ಬಳ್ಳಾರಿ ವಂದಿಸಿದರು. ವೆಂಕಟೇಶ ಕಲ್ಮನಿ ಹಾಗೂ ಪ್ರತೀಕ್ಷಾ ರಂಗಾರೆಡ್ಡಿ ನಿರೂಪಿಸಿದರು. ಪಾರ್ಥ ದಬಾಲಿ ಪ್ರಶಸ್ತಿ ವಿತರಣೆ ಕಾರ್ಯಕ್ರಮ ನಡೆಸಿಕೊಟ್ಟರು.

ಶಾಲೆಯ ನಿರ್ದೇಶಕ ವಿನಾಯಕ ಆರ್., ಉಪನಿರ್ದೇಶಕಿ ಗಾಯತ್ರಿ ವಿ., ಪ್ಲೇಹೋಮ್ ಮುಖ್ಯಸ್ಥೆ ಗಂಗಾ, ಇ.ಎಲ್.ಸಿ. ಮುಖ್ಯಸ್ಥೆ ಮಲ್ಲಿಕಾ ಆರ್., ಪ್ರಾಚಾರ್ಯ ವಿ.ಎಂ. ಅಡ್ನೂರ್, ಉಪಪ್ರಾಚಾರ್ಯ ಪಿ.ಜಿ. ಬ್ಯಾಳಿ ಸೇರಿದಂತೆ ಶಿಕ್ಷಕ-ಶಿಕ್ಷಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಜಿಲ್ಲಾ ವೀರಶೈವ ಮಹಾಸಭಾದಿಂದ ಜಿ.ಎಸ್.ಪಾಟೀಲರಿಗೆ ಸನ್ಮಾನ

ವಿಜಯಸಾಕ್ಷಿ ಸುದ್ದಿ, ಗದಗ

ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಗದಗ ಜಿಲ್ಲಾ ಘಟಕದ ವತಿಯಿಂದ ವಿಧಾನಸಭಾ ಸ್ಪೀಕರ್ ಜಿ. ಎಸ್.ಪಾಟೀಲ ಅವರನ್ನು ಸೋಮವಾರ ಗದುಗಿನ ನಿವಾಸದಲ್ಲಿ ಸನ್ಮಾನಿಸಿ ಗೌರವಿಸಲಾಯಿತು.

ಮಹಾಸಭಾದ ಜಿಲ್ಲಾ ಅಧ್ಯಕ್ಷ ಶರಣಬಸಪ್ಪ ಗುಡಿಮನಿ ನೇತೃತ್ವದಲ್ಲಿ ಪ್ರಧಾನ ಕಾರ್ಯದರ್ಶಿ ಮುರುಘರಾಜೇಂದ್ರ ಬಡ್ನಿ, ಸಿದ್ಧಲಿಂಗಪ್ಪ ಪಟ್ಟಣಶೆಟ್ಟಿ, ಮುತ್ತಣ್ಣ ಗದಗಿನ, ಸಿದ್ದು ಜೀವನಗೌಡ್ರ, ವಸಂತ ಚಿಕ್ಕನಗೌಡ್ರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಜಿಲ್ಲಾ ಘಟಕದ ಕಾರ್ಯಚಟುವಟಿಕೆಗಳು, ಸಮುದಾಯ ಭವನದ ಕಟ್ಟಡದ ಪ್ರಗತಿ ಸೇರಿದಂತೆ ವಿವಿಧ ವಿಷಯಗಳ ಕುರಿತು ಚರ್ಚಿಸಲಾಯಿತು ಎಂದು ಚನ್ನವೀರಪ್ಪ ಹುಣಶೀಕಟ್ಟಿ ತಿಳಿಸಿದ್ದಾರೆ.

## ಸಂಕ್ಷಿಪ್ತ ಸುದ್ದಿಗಳು

# ಸಾಲ ಸಹಾಯಧನಕ್ಕೆ ಮೂರು ನಿಗಮಗಳಿಂದ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಅಂಬಿಗ, ಉಪ್ಪಾರ ಹಾಗೂ ಮರಾಠ ಸಮುದಾಯಗಳ ಆರ್ಥಿಕ, ಶೈಕ್ಷಣಿಕ ಮತ್ತು ಸ್ವಯಂ ಉದ್ಯೋಗ ಉತ್ತೇಜನಕ್ಕಾಗಿ ರಾಜ್ಯ ಸರ್ಕಾರದ ವಿವಿಧ ಅಭಿವೃದ್ಧಿ ನಿಗಮಗಳು 2026–27ನೇ ಸಾಲಿನಲ್ಲಿ ಹಲವು ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿದ್ದು, ಅರ್ಹ ಫಲಾನುಭವಿಗಳಿಂದ ಆನ್‌ಲೈನ್ ಅರ್ಜಿ ಆಹ್ವಾನಿಸಿವೆ.

**ಅಂಬಿಗರ ಚೌಡಯ್ಯ ನಿಗಮ**

ಬೆಸ್ತ, ಅಂಬಿಗ/ಅಂಬಿ, ಗಂಗಾಮತ, ಕಬ್ಬಲಿಗ, ಕೋಲಿ ಹಾಗೂ ಉಪಜಾತಿಗಳ ಅರ್ಹರಿಗೆ ಅರಿವು ಶೈಕ್ಷಣಿಕ ಸಾಲ, ವಿದೇಶಿ ಶಿಕ್ಷಣ ಸಾಲ, ಸ್ವಯಂ ಉದ್ಯೋಗ ನೇರಸಾಲ ಮತ್ತು ಸಹಾಯಧನ ಸೇರಿದಂತೆ ವಿವಿಧ ಯೋಜನೆಗಳ ಸೌಲಭ್ಯ ದೊರೆಯಲಿದೆ. ಅರ್ಜಿ ಸಲ್ಲಿಸಲು ಸೆ.30 ಕೊನೆಯ ದಿನವಾಗಿದ್ದು, ಅರಿವು ಶೈಕ್ಷಣಿಕ ಸಾಲಕ್ಕೆ ಗಡುವಿಲ್ಲ. ಸ್ವಯಂ ಉದ್ಯೋಗ ಯೋಜನೆಯಡಿ ಗರಿಷ್ಠ 2 ಲಕ್ಷದವರೆಗೆ ಸಾಲ ಸಹಾಯಧನ ಸೌಲಭ್ಯ ಕಲ್ಪಿಸಲಾಗುತ್ತಿದೆ.

**ಉಪ್ಪಾರ ಅಭಿವೃದ್ಧಿ ನಿಗಮ**

ಸ್ವಯಂ ಉದ್ಯೋಗ ನೇರಸಾಲ, ಅರಿವು ಶೈಕ್ಷಣಿಕ ಸಾಲ, ವಿದೇಶಿ ವ್ಯಾಸಂಗ ಸಾಲ, ಸ್ವಾವಲಂಬಿ ಸಾರಥಿ ಹಾಗೂ ಶ್ರೀ ಭಗೀರಥ ಗಂಗಾ ಕಲ್ಯಾಣ ಯೋಜನೆಗಳಡಿ ಸೌಲಭ್ಯ ನೀಡಲಾಗುತ್ತಿದೆ. ಅರ್ಜಿ ಸಲ್ಲಿಸಲು ಸೆ.30 ಕೊನೆಯ ದಿನ. ಅರಿವು ಶೈಕ್ಷಣಿಕ ಸಾಲಕ್ಕೆ ಗಡುವಿಲ್ಲ. ಭಗೀರಥ ಗಂಗಾ ಕಲ್ಯಾಣ ಯೋಜನೆಗೆ ಜಿಲ್ಲಾವಾರು ಕನಿಷ್ಠ ಒಂದು ಅಥವಾ ಎರಡು ಎಕರೆ ಜಮೀನು ಹೊಂದಿರಬೇಕು.

**ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮ**

ಶ್ರೀ ಶಹಜೀ ರಾಜೇ ಸಮೃದ್ಧಿ, ಜೀಜಾವು ಜಲಭಾಗ್ಯ, ಅರಿವು ಶೈಕ್ಷಣಿಕ ಸಾಲ, ಮರಾಠ ಮಿಲಿಟ್ರಿ ಹೋಟೆಲ್, ಸ್ವಾವಲಂಬಿ ಸಾರಥಿ, ರಾಜಶ್ರೀ ಶಾಹು ಮಹಾರಾಜ ವಿದೇಶಿ ಸಾಲ, ಸ್ವಾತಂತ್ರ್ಯ ಅಮೃತ ಮುನ್ನಡೆ ಹಾಗೂ ಹೊಲಿಗೆ ಯಂತ್ರ ವಿತರಣಾ ಯೋಜನೆಗಳಡಿ ಸೌಲಭ್ಯ ಕಲ್ಪಿಸಲಾಗುತ್ತಿದೆ. ಅರ್ಜಿ ಸಲ್ಲಿಸಲು ಅ.3 ಕೊನೆಯ ದಿನವಾಗಿದ್ದು, ಶೈಕ್ಷಣಿಕ ಸಾಲ ಯೋಜನೆಗಳಿಗೆ ಗಡುವಿಲ್ಲ.

ಮೂರು ನಿಗಮಗಳ ಯೋಜನೆಗಳಿಗೂ ಅನ್ವಯಿಸುವಂತೆ, ಅರ್ಜಿದಾರರು ಕರ್ನಾಟಕದ ಖಾಯಂ ನಿವಾಸಿಗಳಾಗಿರಬೇಕು ಹಾಗೂ ಸಂಬಂಧಪಟ್ಟ ಸಮುದಾಯಕ್ಕೆ ಸೇರಿದವರಾಗಿರಬೇಕು. ಚಾಲ್ತಿಯಲ್ಲಿರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಹೊಂದಿರಬೇಕು.

ಆಧಾರ್‌ಗೆ ಮೊಬೈಲ್ ಸಂಖ್ಯೆ ಹಾಗೂ ಬ್ಯಾಂಕ್ ಖಾತೆ ಜೋಡಣೆಯಾಗಿರಬೇಕು. ಅರ್ಜಿಯಲ್ಲಿ ಆಧಾರ್, ಜಾತಿ ಆದಾಯ ಪ್ರಮಾಣ ಪತ್ರ ಹಾಗೂ ಬ್ಯಾಂಕ್ ದಾಖಲೆಗಳಲ್ಲಿನ ಹೆಸರು ಮತ್ತು ವಿಳಾಸಗಳು ತಾಳೆಯಾಗುವುದು ಕಡ್ಡಾಯ.

ಅರ್ಹರು ಬೆಂಗಳೂರು ಒನ್, ಕರ್ನಾಟಕ ಒನ್, ಅಟಲ್‌ಜಿ ಜನಸ್ನೇಹಿ ಹಾಗೂ ನಾಗರಿಕ ಸೇವಾ ಕೇಂದ್ರಗಳಲ್ಲಿ ಸೇವಾ ಸಿಂಧು ಮೂಲಕ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಸಂಬಂಧಪಟ್ಟ ನಿಗಮಗಳ ಜಾಲತಾಣ ಹಾಗೂ ಗದಗ ಜಿಲ್ಲಾ ವ್ಯವಸ್ಥಾಪಕರ ಕಚೇರಿಯನ್ನು ಸಂಪರ್ಕಿಸಬಹುದು.

# ಅಕ್ಕನ ಬಳಗದಲ್ಲಿ ಅರ್ಥಪೂರ್ಣ ಶಿಕ್ಷಕರ ದಿನಾಚರಣೆ



**ವಿಜಯಸಾಕ್ಷಿ ಸುದ್ದಿ, ಗದಗ**

ಅಕ್ಕನ ಬಳಗದ ಮಾಸಿಕ ಕಾರ್ಯಕ್ರಮದ ಅಂಗವಾಗಿ ಶಿಕ್ಷಕರ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.


ಕಾರ್ಯಕ್ರಮದಲ್ಲಿ ಅಕ್ಕನ ಬಳಗದ ಹಿರಿಯ ಸದಸ್ಯೆ ಹಾಗೂ ನಿವೃತ್ತ ಶಿಕ್ಷಕಿ ಸುಶೀಲಾ ಗಂಗಣ್ಣ ಕೊಟಿ ಅವರು ಶಿಕ್ಷಕರ ಮಹತ್ವ ಹಾಗೂ ಸಮಾಜ ನಿರ್ಮಾಣದಲ್ಲಿ ಶಿಕ್ಷಕರ ಪಾತ್ರ ಕುರಿತು ಉಪನ್ಯಾಸ ನೀಡಿದರು.

ಅಕ್ಕನ ಬಳಗದ ಮೇಲಿನ ಗೌರವ ಮತ್ತು ಅಭಿಮಾನದಿಂದ ನೂತನವಾಗಿ ನಿರ್ಮಾಣಗೊಳ್ಳುತ್ತಿರುವ ಕಟ್ಟಡದ ಕಾಮಗಾರಿಗೆ 1,00,001 ದೇಣಿಗೆ ನೀಡಿದರು.

ಕಾರ್ಯಕ್ರಮದಲ್ಲಿ ಕಸ್ತೂರಿ ಬ. ಹೀರೆಗೌಡ್ರ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಂಸ್ಥೆಯ ಅಧ್ಯಕ್ಷೆ ಜಯಶ್ರೀ ಉಮೇಶ್ ಹುಬ್ಬಳ್ಳಿ ಸ್ವಾಗತಿಸಿದರು. ಜಯಶ್ರೀ ತಾತನಗೌಡ ಪಾಟೀಲ್ ವಂದನಾರ್ಪಣೆ ಮಾಡಿದರು.

# ಈಶ್ವರಗೌಡ ಬಮ್ಮನಗೌಡ್ರಿಗೆ ಜಿಲ್ಲಾ ಉತ್ತಮ ಶಿಕ್ಷಕ ಪ್ರಶಸ್ತಿ

**ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**



ಹುಬ್ಬಳ್ಳಿ ಗ್ರಾಮೀಣ ವಲಯದ ಉಣಕಲ್ ಕೆಪಿಎಸ್ ಶಾಲೆಯಲ್ಲಿ ಸಹ ಶಿಕ್ಷಕರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಈಶ್ವರಗೌಡ ಶಂ. ಬಮ್ಮನಗೌಡ್ರ ಅವರಿಗೆ ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಲಭಿಸಿದೆ.

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸೆ. 5ರಂದು ಧಾರವಾಡದಲ್ಲಿ ಆಯೋಜಿಸಿದ್ದ ಜಿಲ್ಲಾ ಮಟ್ಟದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಮೂಲತಃ ಗದಗ ಜಿಲ್ಲೆ ರೋಣ ತಾಲೂಕಿನ ಗಾಡಗೋಳಿ ಗ್ರಾಮದವರಾದ ಈಶ್ವರಗೌಡ ಬಮ್ಮನಗೌಡ್ರ ಅವರು ಬೆಂಗಳೂರು ಹಾಗೂ ಧಾರವಾಡ ಜಿಲ್ಲೆಗಳ ವಿವಿಧ ಶಾಲೆಗಳಲ್ಲಿ ಸುಮಾರು 28 ವರ್ಷಗಳ ಸುದೀರ್ಘ ಸೇವೆ ಸಲ್ಲಿಸಿದ್ದಾರೆ.

### 'ವೇರಿ ಗುಡ್ ಮಾರ್ನಿಂಗ್' ದಶಮಾನೋತ್ಸವದಲ್ಲಿ ಗಣ್ಯರ ಸಮಾಗಮ: ವಿಶೇಷ ಸಂಚಿಕೆ ಬಿಡುಗಡೆ

# ದಶಕದ ಪತ್ರಿಕಾ ಪಯಣಕ್ಕೆ ಅದ್ದೂರಿ ಸಂಭ್ರಮ

**ವಿಜಯಸಾಕ್ಷಿ ಸುದ್ದಿ, ಗದಗ**



ತಾಂತ್ರಿಕತೆಯ ವೇಗದ ನಡುವೆ ಪತ್ರಿಕಾರಂಗ ಹಲವು ಸವಾಲುಗಳನ್ನು ಎದುರಿಸುತ್ತಿರುವ ಸಂದರ್ಭದಲ್ಲೂ 'ವೇರಿ ಗುಡ್ ಮಾರ್ನಿಂಗ್' ಕನ್ನಡ ದಿನಪತ್ರಿಕೆ ಹತ್ತು ವರ್ಷಗಳಿಂದ ಜನಪರ ಹಾಗೂ ಸಾಮಾಜಿಕ ಕಾಳಜಿಯೊಂದಿಗೆ ನಿರಂತರವಾಗಿ ಪತ್ರಿಕಾ ಸೇವೆ ಸಲ್ಲಿಸುತ್ತಿರುವುದು ಶ್ಲಾಘನೀಯ ಎಂದು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಹೇಳಿದರು.

ನಗರದ ಜಗದ್ಗುರು ತೋಂಟದಾರ್ಯ ಕಲ್ಯಾಣ ಕೇಂದ್ರದಲ್ಲಿ ಗೌತಮ ಬುದ್ಧ ಸೇವಾ ಸಮಿತಿ ವತಿಯಿಂದ ಆಯೋಜಿಸಿದ್ದ 'ವಾಯ್ಸ್ ಆಫ್ ಗದಗ ಸೀಸನ್–2' ಕನ್ನಡ ಚಲನಚಿತ್ರ ಗೀತೆಗಳ ರಾಜ್ಯಮಟ್ಟದ ಸ್ಪರ್ಧೆ ಹಾಗೂ 'ವೇರಿ ಗುಡ್ ಮಾರ್ನಿಂಗ್' ದಿನಪತ್ರಿಕೆಯ ದಶಮಾನೋತ್ಸವ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಮೊಬೈಲ್ ಹಾಗೂ ಡಿಜಿಟಲ್ ಮಾಧ್ಯಮಗಳ ಪ್ರಾಬಲ್ಯದ ನಡುವೆಯೂ ಸ್ಥಳೀಯ, ಜಿಲ್ಲಾ, ರಾಜ್ಯ ಹಾಗೂ ಅಂತಾರಾಷ್ಟ್ರೀಯ ವಿದ್ಯಮಾನಗಳನ್ನು ಜನರಿಗೆ ತಲುಪಿಸುವ ಮೂಲಕ ಪತ್ರಿಕೆ ತನ್ನದೇ ಆದ ಛಾಪು ಮೂಡಿಸಿದೆ. ಶಾಸಕಾಂಗ, ಕಾರ್ಯಾಂಗ ಹಾಗೂ ನ್ಯಾಯಾಂಗದ ಲೋಪಗಳನ್ನು ತಿದ್ದಿ ಸಮಾಜವನ್ನು ಎಚ್ಚರಿಸುವ ಗುರುತರ ಜವಾಬ್ದಾರಿ ಪತ್ರಿಕಾರಂಗಕ್ಕಿದ್ದು, ಸಂಪಾದಕ ದೇವಪ್ಪ ಎನ್. ಲಿಂಗದಾಳ ಅವರ ನೇತೃತ್ವದಲ್ಲಿ 'ವೇರಿ ಗುಡ್ ಮಾರ್ನಿಂಗ್' ಆ ಕಾರ್ಯ ಮಾಡುತ್ತಿದೆ ಎಂದರು.

ಪತ್ರಕರ್ತ ಅನಂತ ಕಾರ್ಕಳ ಮಾತನಾಡಿ, ಹಲವು ಸವಾಲುಗಳ ನಡುವೆಯೂ 'ವೇರಿ ಗುಡ್ ಮಾರ್ನಿಂಗ್' ಹತ್ತು ವರ್ಷಗಳ ಪಯಣ ಪೂರ್ಣಗೊಳಿಸಿರುವುದು ಸಂಪಾದಕ ದೇವಪ್ಪ ಎನ್. ಲಿಂಗದಾಳ ಹಾಗೂ ಸಿದ್ದಪ್ಪ ಎನ್. ಲಿಂಗದಾಳ ಅವರ ಪರಿಶ್ರಮದ ಫಲವಾಗಿದೆ.

ಪತ್ರಿಕೆ ಜನಪ್ರಿಯವಾಗಿ ಹೊರಹೊಮ್ಮಲು ಅವರ ನಿರಂತರ ಶ್ರಮ ಕಾರಣ. ಪತ್ರಿಕೆಯ ಆರಂಭದ ದಿನಗಳಿಂದಲೂ ತಮ್ಮಿಂದಾದ ಪ್ರೋತ್ಸಾಹ ಹಾಗೂ ಮಾರ್ಗದರ್ಶನ ನೀಡುತ್ತಿದ್ದು, ಮುಂದೆಯೂ ಪತ್ರಿಕೆ ಶತಮಾನೋತ್ಸವ ಆಚರಿಸುವಂತಾಗಲಿ ಎಂದು ಹಾರೈಸಿದರು.

ದಶಮಾನೋತ್ಸವ ವಿಶೇಷ ಸಂಚಿಕೆ ಬಿಡುಗಡೆಗೊಳಿಸಿದ ಕಿತ್ತೂರು ಕರ್ನಾಟಕ ದಿನಪತ್ರಿಕೆ ಸಂಪಾದಕ ಮಂಜುನಾಥ ಅಬ್ಬಿಗೇರಿ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಪತ್ರಿಕೆಗಳ ಸಂಪಾದಕರು ಒಗ್ಗಟ್ಟಾಗಿ ಸರ್ಕಾರ ಹಾಗೂ ವಾರ್ತಾ ಇಲಾಖೆಯಿಂದ ದೊರೆಯುವ ಸೌಲಭ್ಯಗಳನ್ನು ನ್ಯಾಯಯುತವಾಗಿ ಪಡೆಯಲು ಸಂಘಟಿತ ಪ್ರಯತ್ನ ನಡೆಸಬೇಕು ಎಂದು ಕರೆ ನೀಡಿದರು.

ತೋಂಟದಾರ್ಯ ಮಠದ ಆಡಳಿತಾಧಿಕಾರಿ ಎಸ್.ಎಸ್. ಪಟ್ಟಣಶೆಟ್ಟರ ಮಾತನಾಡಿ, ಸಮಾಜದ ಅಂಕುಡೊಂಕುಗಳನ್ನು ತಿದ್ದುವಲ್ಲಿ ಪತ್ರಿಕಾರಂಗ ಪ್ರಮುಖ ಪಾತ್ರ ವಹಿಸುತ್ತಿದ್ದು, 'ವೇರಿ ಗುಡ್ ಮಾರ್ನಿಂಗ್' ಶೋಷಿತ ಸಮುದಾಯದ ಸಮಸ್ಯೆಗಳಿಗೆ ಧ್ವನಿಯಾಗುತ್ತಿರುವುದು ಪ್ರಶಂಸನೀಯ ಎಂದರು.

> ಪತ್ರಿಕಾರಂಗ ಹಲವು ಸವಾಲುಗಳ ನಡುವೆಯೂ 'ವೇರಿ ಗುಡ್ ಮಾರ್ನಿಂಗ್' ಹತ್ತು ವರ್ಷಗಳಿಂದ ಜನಪರವಾಗಿ ಸೇವೆ ಸಲ್ಲಿಸುತ್ತಿರುವುದು ಶ್ಲಾಘನೀಯ. ಪತ್ರಿಕೆ ಇನ್ನಷ್ಟು ಅಭಿವೃದ್ಧಿ ಹೊಂದಿ ಸಾಮಾಜಿಕ ಸೇವೆಯಲ್ಲಿ ಅವಿರತವಾಗಿ ತೊಡಗಲಿ.
>
> - ಎಸ್.ವಿ. ಸಂಕನೂರ, ವಿಧಾನ ಪರಿಷತ್ ಸದಸ್ಯ

'ರತ್ನಾಕರವಾಣಿ' ಸಂಪಾದಕ ಜಗದೀಶ ಪೂಜಾರ ಮಾತನಾಡಿ, 'ವೇರಿ ಗುಡ್ ಮಾರ್ನಿಂಗ್' ಸಂಪಾದಕರು ಸ್ವಾಭಿಮಾನದಿಂದ ತಮ್ಮ ಕಾರ್ಯವನ್ನು ಮುಂದುವರಿಸುತ್ತಿದ್ದು, ಮಾತಿಗಿಂತ ಕಾಯಕದ ಮೂಲಕ ತಮ್ಮ ಸಾಮರ್ಥ್ಯವನ್ನು ತೋರಿಸುತ್ತಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

**ವಾಯ್ಸ್ ಆಫ್ ಗದಗ:** ನಾಗರಾಜ ಹುಣಸಿಕಟ್ಟಿ ಪ್ರಥಮ ರಾಜ್ಯಮಟ್ಟದ ಗೀತಗಾಯನ ಸ್ಪರ್ಧೆಯಲ್ಲಿ ನಾಗರಾಜ ಹುಣಸಿಕಟ್ಟಿ ಪ್ರಥಮ, ಕೀರ್ತನಾ ಜರತಾರೆ ದ್ವಿತೀಯ, ಶ್ರೇಯಾ ರಂರೇಜ ತೃತೀಯ ಹಾಗೂ ಜಯಶ್ರೀ ರಾಜೋಳಿ ಚತುರ್ಥ ಸ್ಥಾನ ಪಡೆದರು.

ಸಂಪಾದಕ ದೇವಪ್ಪ ಎನ್. ಲಿಂಗದಾಳ ಅಧ್ಯಕ್ಷತೆ ವಹಿಸಿದ್ದರು. ಸಿದ್ದಪ್ಪ ಎನ್. ಲಿಂಗದಾಳ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮವನ್ನು ರಾಜಕರಣ್ ನಿರೂಪಿಸಿದರು.

ಮಂಜುನಾಥ ಲಿಂಗದಾಳ ಸ್ವಾಗತಿಸಿದರು. ಬಲರಾಜ ಅರಬರ ವಂದಿಸಿದರು.

ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ರಾಜು ಹೆಬ್ಬಳ್ಳಿ, ಪತ್ರಕರ್ತ ಆನಂದ ಸಾಲಿಗ್ರಾಮ, 'ನಾಗರಿಕ' ಸಂಪಾದಕ ಅಜೀತ್ ಹೊಂಬಾಳಿ, 'ಚಕ್ರವರ್ತಿ' ಪತ್ರಿಕೆ ಸಂಪಾದಕ ಎಸ್.ಆರ್. ಬಾಂಡಗೆ, 'ಸೂಪರ್ ವಾಣಿ' ಸಂಪಾದಕ ಮಹಾಂತೇಶ ಮದ್ನೂರ, ದಲಿತ ಯುವ ಸೇನಾ ಸಮಿತಿ ಅಧ್ಯಕ್ಷ ವಿಜಯ್ ಎಸ್. ಮುಳಗುಂದ, ಕಾಂಗ್ರೆಸ್ ಎಸ್ಸಿ ಘಟಕದ ಅಧ್ಯಕ್ಷ ಬಸವರಾಜ ಕಡೇಮನಿ, ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ. ರಾಜೇಂದ್ರ ಗಡಾದ, ರಾಷ್ಟ್ರಪ್ರಶಸ್ತಿ ಪುರಸ್ಕೃತ ಎಸ್.ಎನ್. ಬಳ್ಳಾರಿ, ಕರ್ನಾಟಕ ರಾಜ್ಯ ಸರ್ಕಾರಿ ಎಸ್ಸಿ–ಎಸ್ಟಿ ನೌಕರರ ಸಂಘದ ಜಿಲ್ಲಾ ಅಧ್ಯಕ್ಷ ಹರೀಶ ಚವ್ಹಾಣ, ನಗರಸಭೆ ಸದಸ್ಯ ಎಲ್.ಡಿ. ಚಂದಾವರಿ, ಮುಖಂಡ ಸತೀಶ್ ಎಚ್. ಹೂಲಿ, ಪ್ರೊ. ಮಲ್ಲೇಶ ಹೊಸೂರ, ರವಿ ಎಲ್. ಗುಂಜೀಕರ, ಮಲ್ಲಿಕಾರ್ಜುನ ಕಲಕಂಬಿ ಸೇರಿದಂತೆ ವಿವಿಧ ಕ್ಷೇತ್ರಗಳ ಗಣ್ಯರು ಉಪಸ್ಥಿತರಿದ್ದರು.

### ವ್ಹಿಬಿಜಿರಾಮ್ ಜಿ ಕಾಮಗಾರಿ ಪರಿಶೀಲಿಸಿದ ಇಒ ಶ್ರೀಧರ್ ಚಿನಗುಂಡಿ; 125 ದಿನ ಉದ್ಯೋಗದ ಭರವಸೆ

# ಅಳತೆಗೆ ತಕ್ಕಂತೆ ಕೆಲಸ ಮಾಡಿ

**ವಿಜಯಸಾಕ್ಷಿ ಸುದ್ದಿ, ನರಗುಂದ**



ತಾಲೂಕಿನ ಬೆನಕನಕೊಪ್ಪ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸಂಕದಾಳ ಗ್ರಾಮದಲ್ಲಿ ವ್ಹಿಬಿಜಿರಾಮ್ ಜಿ ಯೋಜನೆಯಡಿ ನಡೆಯುತ್ತಿರುವ ಕೆರೆ ಅಭಿವೃದ್ಧಿ ಕಾಮಗಾರಿಗೆ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಶ್ರೀಧರ್ ಚಿನಗುಂಡಿ ಸೋಮವಾರ ಭೇಟಿ ನೀಡಿ ಪರಿಶೀಲಿಸಿದರು.

ಕಾಮಗಾರಿ ಸ್ಥಳದಲ್ಲಿದ್ದ ಕೂಲಿ ಕಾರ್ಮಿಕರೊಂದಿಗೆ ಸಂವಾದ ನಡೆಸಿದ ಅವರು, ಯೋಜನೆಯಡಿ ದೊರೆಯುವ ಸೌಲಭ್ಯಗಳು, ಕೂಲಿ ಪಾವತಿ ಹಾಗೂ ಹಾಜರಾತಿ ನಿಯಮಗಳ ಕುರಿತು ಮಾಹಿತಿ ನೀಡಿದರು. ಯೋಜನೆಯಡಿ ದಿನಕ್ಕೆ ?382 ಕೂಲಿ ನಿಗದಿಯಾಗಿದ್ದು, ನಿಗದಿತ ಅಳತೆಗೆ ಅನುಗುಣವಾಗಿ ಕೆಲಸ ಮಾಡಿದರೆ ಪೂರ್ಣ ಕೂಲಿ ದೊರೆಯಲಿದೆ. ಕೆಲಸದ ಅಳತೆಯಲ್ಲಿ ವ್ಯತ್ಯಾಸವಾದರೆ ಅದಕ್ಕೆ ಅನುಗುಣವಾಗಿ ಕೂಲಿ ಮೊತ್ತದಲ್ಲೂ ವ್ಯತ್ಯಾಸವಾಗಲಿದೆ ಎಂದು ಸ್ಪಷ್ಟಪಡಿಸಿದರು.

ನಿರಂತರವಾಗಿ ಕೆಲಸ ಒದಗಿಸುವಂತೆ ಕಾರ್ಮಿಕರು ಮನವಿ ಮಾಡಿದರು. ಈ ವೇಳೆ ವೈಯಕ್ತಿಕವಾಗಿ ಇಒ ಅವರನ್ನು ಭೇಟಿಯಾದ ಕಾರ್ಮಿಕರು ನಮೂನೆ–6 ಸಲ್ಲಿಸಿದ ಬಳಿಕ 15 ದಿನಗಳಲ್ಲಿ ಕೆಲಸ ದೊರೆಯದಿದ್ದರೆ ಏನು ಮಾಡಬೇಕು ಎಂದು ಪ್ರಶ್ನಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಇಒ, ಮೊದಲು ನಮೂನೆ–6 ಸಲ್ಲಿಸುವಂತೆ ಸೂಚಿಸಿ, 15 ದಿನಗಳೊಳಗೆ ಕೆಲಸ ಒದಗಿಸಲು ಕ್ರಮ ಕೈಗೊಳ್ಳಲಾಗುವುದು. ಸಿಬ್ಬಂದಿಯಿಂದ ಕೆಲಸ ನೀಡಲು ಸಾಧ್ಯವಾಗದಿದ್ದರೆ ಯೋಜನೆಯ ನಿಯಮದಂತೆ ನಿರುದ್ಯೋಗ ಭತ್ಯೆ ನೀಡುವ ಕುರಿತು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಲಾಗುವುದು ಎಂದು ಭರವಸೆ ನೀಡಿದರು.

> ಅಳತೆಗೆ ಅನುಗುಣವಾಗಿ ನಿಗದಿತ ಪ್ರಮಾಣದ ಕೆಲಸ ಮಾಡಿದರೆ ಕಾರ್ಮಿಕರಿಗೆ ಪೂರ್ಣ ಕೂಲಿ ದೊರೆಯಲಿದೆ. ನಮೂನೆ–6 ಸಲ್ಲಿಸಿದ 15 ದಿನಗಳೊಳಗೆ ಕೆಲಸ ಒದಗಿಸಲು ಕ್ರಮ ಕೈಗೊಳ್ಳಲಾಗುವುದು. ಸಾಧ್ಯವಾಗದಿದ್ದರೆ ನಿಯಮಾನುಸಾರ ನಿರುದ್ಯೋಗ ಭತ್ಯೆ ನೀಡುವ ಕುರಿತು ಕ್ರಮ ಕೈಗೊಳ್ಳುತ್ತೇವೆ.
>
> - ಶ್ರೀಧರ್ ಚಿನಗುಂಡಿ, ತಾಲೂಕು ಪಂಚಾಯಿತಿ ಇಒ

ತಾಲೂಕು ಪಂಚಾಯಿತಿ ಹಾಗೂ ಗ್ರಾಮ ಪಂಚಾಯಿತಿ ವತಿಯಿಂದ ಯೋಜನೆಯಡಿ ನಿರಂತರವಾಗಿ ಕಾಮಗಾರಿಗಳನ್ನು ಕೈಗೊಳ್ಳಲು ಕ್ರಮ ವಹಿಸಲಾಗುತ್ತಿದ್ದು, ಕಾರ್ಮಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಕಾಮಗಾರಿ ಸ್ಥಳದಲ್ಲಿ ದಿನದ ಎರಡೂ ಹಾಜರಾತಿಗಳಿಗೆ ಕಾರ್ಮಿಕರು ಕಡ್ಡಾಯವಾಗಿ ಹಾಜರಾಗಬೇಕು. ಒಂದು ಹಾಜರಾತಿಗೆ ಮಾತ್ರ ಹಾಜರಾಗಿ ಮತ್ತೊಂದಕ್ಕೆ ಗೈರಾದರೆ ಕೂಲಿ ಪಾವತಿಯಲ್ಲಿ ತೊಂದರೆಯಾಗಲಿದೆ. ಆದ್ದರಿಂದ ಎರಡೂ ಹಾಜರಾತಿಗಳನ್ನು ಕಡ್ಡಾಯವಾಗಿ ನೀಡುವಂತೆ ಸೂಚಿಸಿದರು.

ವ್ಹಿಬಿಜಿರಾಮ್ ಜಿ ಯೋಜನೆಯಡಿ ವರ್ಷಕ್ಕೆ 125 ದಿನಗಳವರೆಗೆ ಉದ್ಯೋಗ ಒದಗಿಸುವ ಅವಕಾಶವಿದ್ದು, ಅರ್ಹ ಕೂಲಿಕಾರ್ಮಿಕರಿಗೆ ವರ್ಷದಲ್ಲಿ 125 ದಿನಗಳವರೆಗೆ ಕೆಲಸ ಕಲ್ಪಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಶ್ರೀಧರ್ ಚಿನಗುಂಡಿ ತಿಳಿಸಿದರು.

# ಆದರ್ಶ ಶಿಕ್ಷಕ ಬಿ.ಎ. ಮುಳ್ಳಳ್ಳಿ ಅವರಿಗೆ ಕಸಾಪದಿಂದ ಗುರುವಂದನೆ




**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಸಮಾಜವನ್ನು ತಿದ್ದಿ ರೂಪಿಸುವ ಶಿಕ್ಷಕರು ಸಮಾಜದ ದೊಡ್ಡ ಆಸ್ತಿಯಾಗಿದ್ದಾರೆ. ಗಡಿಯಲ್ಲಿ ಸೈನಿಕರು ದೇಶವನ್ನು ಕಾಯ್ದರೆ, ರೈತರು ಅನ್ನ ನೀಡುತ್ತಾರೆ. ಆದರೆ ತರಗತಿಯ ನಾಲ್ಕು ಗೋಡೆಗಳ ನಡುವೆ ಶಿಕ್ಷಕರು ದೇಶದ ಭವಿಷ್ಯವನ್ನು ನಿರ್ಮಿಸುತ್ತಾರೆ ಎಂದು ಯುವ ಮುಖಂಡ ಸುನೀಲ ಗಂಗಣ್ಣ ಮಹಾಂತಶೆಟ್ಟರ ಹೇಳಿದರು.

ತಾಲೂಕ ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ 'ಮಾಸದ ಮಾತು' ಕಾರ್ಯಕ್ರಮ ಸರಣಿಯ 40ನೇ ಕಾರ್ಯಕ್ರಮವಾಗಿ ಶನಿವಾರ ಶಿಕ್ಷಕರ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ 'ಹಿರಿಯ ಗುರುಚೇತನ: ಸಂವಾದ–ಸಮ್ಮಾನ' ಕಾರ್ಯಕ್ರಮದಲ್ಲಿ ಸಾರ್ಥಕ 94 ಸಂವತ್ಸರಗಳನ್ನು ಪೂರೈಸಿದ ಆದರ್ಶ ಶಿಕ್ಷಕ ಬಿ.ಎ. ಮುಳ್ಳಳ್ಳಿ ಅವರನ್ನು ಗೌರವಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳ ಭವಿಷ್ಯಕ್ಕೆ ಭದ್ರ ಬುನಾದಿ ಹಾಕಿದ ವಿದ್ಯಾಗುರುಗಳನ್ನು ಸನ್ಮಾನಿಸುವುದು ನಮ್ಮ ಸೌಭಾಗ್ಯ. ಬಿ.ಎ. ಮುಳ್ಳಳ್ಳಿ ಅವರು ಅಂದಿನ ಕಾಲದಲ್ಲಿಯೇ ಶ್ರೇಷ್ಠ ಶಿಕ್ಷಕರಾಗಿ ಸೇವೆ ಸಲ್ಲಿಸಿ ಸಾವಿರಾರು ವಿದ್ಯಾರ್ಥಿಗಳ ಜೀವನ ರೂಪಿಸಿದ ಕೀರ್ತಿಗೆ ಪಾತ್ರರಾಗಿದ್ದಾರೆ ಎಂದರು.

ಮುಖ್ಯ ಅತಿಥಿ ಪ್ರಭಾರಿ ಕ್ಷೇತ್ರ ಸಮನ್ವಯಾಧಿಕಾರಿ ಎಸ್.ಕೆ. ಹವಾಲ್ದಾರ ಮಾತನಾಡಿ, ನಾಡಿಗೆ ವಿ.ಪಿ. ಬಳಿಗಾರ ಅವರಂತಹ ಶ್ರೇಷ್ಠ ಐಎಎಸ್ ಅಧಿಕಾರಿಗಳನ್ನು ನೀಡಿದ ಶ್ರೇಯಸ್ಸು ಹಿರಿಯ ಗುರು ಬಿ.ಎ. ಮುಳ್ಳಳ್ಳಿ ಅವರಿಗೆ ಸಲ್ಲುತ್ತದೆ ಎಂದರು.

ವಿಶ್ರಾಂತ ಶಿಕ್ಷಣ ಸಂಯೋಜಕ ಐ.ಎಸ್. ಮಡಿವಾಳರ ಮಾತನಾಡಿ, ಅಪಾರ ಶಿಷ್ಯ ಬಳಗ ಹೊಂದಿರುವ ಮುಳ್ಳಳ್ಳಿ ಗುರುಗಳು ಮಾದರಿ ಶಿಕ್ಷಕರಾಗಿದ್ದಾರೆ. 94ರ ಹರೆಯದಲ್ಲಿಯೂ ಅವರ ಜೀವನೋತ್ಸಾಹ ಎಲ್ಲರಿಗೂ ಪ್ರೇರಣೆಯಾಗಿದೆ ಎಂದರು.

ಲಕ್ಷ್ಮೇಶ್ವರ ತಾಲೂಕ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಈಶ್ವರ ಮೆಡ್ಲೇರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಎಪಿಎಂಸಿ ಮಾಜಿ ಅಧ್ಯಕ್ಷ ನೀಲಪ್ಪ ಹತ್ತಿ ಗುರುವಂದನಾ ನುಡಿಗಳನ್ನಾಡಿದರು. ಕಸಾಪ ಹಾಗೂ ಶಿಷ್ಯ ಬಳಗದ ವತಿಯಿಂದ ಬಿ.ಎ. ಮುಳ್ಳಳ್ಳಿ ಅವರಿಗೆ ಗೌರವ ಸನ್ಮಾನ ಸಲ್ಲಿಸಲಾಯಿತು.

ಕಸಾಪದ ಈರಣ್ಣ ಗಾಣಿಗೇರ ಸ್ವಾಗತಿಸಿದರು. ಶಂಕರ ಶಿಳ್ಳಿನ ಹಾಗೂ ಎನ್.ಪಿ. ಪ್ಯಾಟಿಗೌಡ್ರ ಕಾರ್ಯಕ್ರಮ ನಿರ್ವಹಿಸಿದರು. ಸಂಘಟನಾ ಕಾರ್ಯದರ್ಶಿ ನಾಗರಾಜ ಮಜ್ಜಿಗುಡ್ಡ ನಿರೂಪಿಸಿದರು. ಶಿಕ್ಷಕ ರಾಜಣ್ಣ ಮುಳ್ಳಳ್ಳಿ ವಂದಿಸಿದರು. ವಿ.ಎಂ. ಹೂಗಾರ ಗುರುವಂದನಾ ಗೀತೆ ಪ್ರಸ್ತುತಪಡಿಸಿದರು.

ಕಾರ್ಯಕ್ರಮದಲ್ಲಿ ಗಣ್ಯ ವ್ಯಾಪಾರಸ್ಥ ಶಿವು ವಡಕಣ್ಣವರ, ಈರಣ್ಣ ಬೆಳವಗಿ, ಪ್ರಿಯಾಂಕ ಮುಳ್ಳಳ್ಳಿ, ಶಿಕ್ಷಕಿ ವೀಣಾ ಜಾಧವ, ಪ್ರವೀಣಕುಮಾರ ಮುಳ್ಳಳ್ಳಿ, ದೇವೇಂದ್ರಗೌಡ ಪಾಟೀಲ, ನಾಗನಗೌಡ ಪಾಟೀಲ, ರವಿ ತಂತ್ರಿ ಸೇರಿದಂತೆ ಗಣ್ಯರು ಹಾಗೂ ಶಿಷ್ಯ ಬಳಗದವರು ಉಪಸ್ಥಿತರಿದ್ದರು.

# ಪೂರ್ವಾಶ್ರಮದ ಸಂಬಂಧ ವಾಂತಿ ಮಾಡಿದಂತೆ; ಮತ್ತೆ ನೆಕ್ಕಿದಂತಾಗುತ್ತದೆ

**ವಿಜಯಸಾಕ್ಷಿ ಸುದ್ದಿ, ಅಣ್ಣಿಗೇರಿ**



ಅಪಘಾತಕ್ಕೀಡಾಗಿ ಒಂದು ತಿಂಗಳ ಕಾಲ ಪ್ರಜ್ಞಾಹೀನರಾಗಿದ್ದ ಸಂದರ್ಭ ಸೇರಿದಂತೆ ತಮ್ಮ ಬದುಕಿನಲ್ಲಿ ಒಂದೇ ಒಂದು ಬಾರಿಯೂ ಗದಗ ತೋಂಟದ ಸಿದ್ದಲಿಂಗ ಶ್ರೀಗಳು ಪೂರ್ವಾಶ್ರಮದ ಸಂಬಂಧವನ್ನು ನೆನಪಿಸಿಕೊಳ್ಳಲಿಲ್ಲ ಎಂದು ಪ್ರೊ. ಎಸ್.ಎಸ್. ಹರ್ಲಾಪೂರ ಹೇಳಿದರು.

ಸ್ಥಳೀಯ ಬಸವಕೇಂದ್ರ ಹಾಗೂ ಅಣ್ಣಿಗೇರಿ ತಾಲೂಕು ಶರಣ ಸಾಹಿತ್ಯ ಪರಿಷತ್ತಿನ ಯುವ ಘಟಕದ ಆಶ್ರಯದಲ್ಲಿ ಪಟ್ಟಣದ ತೋಂಟದಾರ್ಯ ಮಠದಲ್ಲಿ ನಡೆದ ಶರಣ ಶ್ರಾವಣ ಸಮಾರಂಭದಲ್ಲಿ ಅವರು ಮಾತನಾಡಿದರು.

ಸ್ವಾಮಿಗಳು ಪೂರ್ವಾಶ್ರಮದೊಂದಿಗೆ ಸಂಬಂಧ ಇಟ್ಟುಕೊಳ್ಳುವುದು ವಾಂತಿ ಮಾಡಿದ ಬಳಿಕ ಅದನ್ನೇ ಮತ್ತೆ ನೆಕ್ಕಿದಂತಾಗುತ್ತದೆ ಎಂಬುದು ಸಿದ್ದಲಿಂಗ ಶ್ರೀಗಳ ಸ್ಪಷ್ಟ ನಿಲುವಾಗಿತ್ತು. ಈ ವಿಚಾರವನ್ನು ಅವರೇ ತಮ್ಮ ಪುಸ್ತಕದಲ್ಲಿ ದಾಖಲಿಸಿದ್ದಾರೆ. ಧರ್ಮ, ಶಿಕ್ಷಣ ಹಾಗೂ ಪರಿಸರ ಕ್ಷೇತ್ರದಲ್ಲಿ ಜನಮಾನಸವನ್ನು ಕಟ್ಟುವ ಕಾರ್ಯಕ್ಕೆ ಶ್ರೀಗಳು ತಮ್ಮ ಬದುಕಿನುದ್ದಕ್ಕೂ ಅಹರ್ನಿಶಿ ಶ್ರಮಿಸಿದರು ಎಂದು ಸ್ಮರಿಸಿದರು.

ಸಿದ್ದಲಿಂಗ ಶ್ರೀಗಳ ಹೋರಾಟದ ಕುರಿತು ಉಪನ್ಯಾಸ ನೀಡಿದ ಮುಖ್ಯಾಧ್ಯಾಪಕ ಎನ್.ಎಸ್. ಮೇಲ್ಮರಿ, ಜಗದ್ಗುರು ಪಟ್ಟಕ್ಕೆ ಬಂದ ಕ್ಷಣದಿಂದಲೇ ಮನುಷ್ಯ ಮನುಷ್ಯನನ್ನು ಹೊರುವುದು ಅಮಾನವೀಯ ಎಂಬ ನಿಲುವಿನೊಂದಿಗೆ ಅಡ್ಡಪಲ್ಲಕ್ಕಿ ಪದ್ಧತಿಯನ್ನು ತಿರಸ್ಕರಿಸಿ ವೈಚಾರಿಕತೆಯ ದಿಕ್ಕು ತೋರಿಸಿದರು ಎಂದರು.

ಜಾತ್ರೆಗೆ ಹೊಸ ಸ್ವರೂಪ ನೀಡುವುದು, ಪುಸ್ತಕ ಪ್ರಕಟಣೆ, ಹೊಸ್ಕೋ, ಕಪ್ಪತಗುಡ್ಡ ಹಾಗೂ ಗೋಕಾಕ ವರದಿ ಸೇರಿದಂತೆ ವಿವಿಧ ಹೋರಾಟಗಳಲ್ಲಿ ಸಿದ್ದಲಿಂಗ ಶ್ರೀಗಳು ಕ್ರಾಂತಿಕಾರಿ ಹೆಜ್ಜೆಗಳನ್ನು ಇಟ್ಟಿದ್ದರು ಎಂದು ಹೇಳಿದರು.

ಸುಮಿತ್ರಾ ಹುಣಸಿಮರದ ನಿರ್ದೇಶನದ 'ಉರಿಯ ಗದ್ದುಗೆ' ರೂಪಕದಲ್ಲಿ ನಿಂಗಮ್ಮ ಹೂಗಾರ ಶಾಲೆಯ ಮಕ್ಕಳು ಮನಮಿಡಿಯುವ ಅಭಿನಯ ನೀಡಿದರು. ಅನ್ನಪೂರ್ಣಾ ಆಕಳವಾಡಿ ಪ್ರಸಾದ ದಾಸೋಹ ನೆರವೇರಿಸಿದರು. ರೇವತಿ ಕರವೀರಮಠ, ಸಾಕ್ಷಿ ಹರ್ಲಾಪೂರ ಸಂಗಡಿಗರು ವಚನ ಪಾರಾಯಣ ನಡೆಸಿದರು. ಡಾ. ಶಾಂತಾ ಲಕ್ಷ್ಮೇಶ್ವರ ವಚನಮಂಗಲ ನೆರವೇರಿಸಿದರು.

ಶರಣ ಶ್ರಾವಣದ ಮೂಲಕ ಸಿದ್ದಲಿಂಗ ಶ್ರೀಗಳ ಬದುಕಿನ ವಿವಿಧ ಮಜಲುಗಳನ್ನು ಮರುಸ್ಮರಿಸುವ ಕಾರ್ಯ ಮಾಡಿದ ಪ್ರೊ. ಎಸ್.ಎಸ್. ಹರ್ಲಾಪೂರ ದಂಪತಿಗಳನ್ನು ಸನ್ಮಾನಿಸಲಾಯಿತು.

# ಕದಡಿಯಲ್ಲಿ ನೀಲಾಂಬಿಕಾ ದೇವಿ ಜಾತ್ರಾ ವೈಭವ

**ವಿಜಯಸಾಕ್ಷಿ ಸುದ್ದಿ, ಗದಗ**

ತಾಲೂಕಿನ ಕದಡಿ ಗ್ರಾಮದಲ್ಲಿ ಶ್ರಾವಣ ಮಾಸದ ಕೊನೆಯ ಸೋಮವಾರದ ಅಂಗವಾಗಿ ಗ್ರಾಮದ ಆರಾಧ್ಯ ದೇವತೆ ಶ್ರೀ ನೀಲಾಂಬಿಕಾ ದೇವಿ ಜಾತ್ರಾ ಮಹೋತ್ಸವ ಹಾಗೂ ಮಹಾರಥೋತ್ಸವ ಸೋಮವಾರ ಸಂಜೆ 6.15ಕ್ಕೆ ಅಪಾರ ಭಕ್ತರ ಸಮ್ಮುಖದಲ್ಲಿ ವಿಜೃಂಭಣೆಯಿಂದ ನೆರವೇರಿತು.

ಗ್ರಾಮದ ಸದ್ಭಕ್ತ ಮಂಡಳಿ ಹಾಗೂ ಗುರು–ಹಿರಿಯರ ಮಾರ್ಗದರ್ಶನದಲ್ಲಿ ನಡೆದ ರಥೋತ್ಸವದಲ್ಲಿ ಡೊಳ್ಳು, ಜಾಗಟೆ ಸೇರಿದಂತೆ ವಿವಿಧ ವಾದ್ಯಗಳ ಸದ್ದಿಗೆ ಭಕ್ತರು ಜಯಘೋಷ ಮೊಳಗಿಸಿದರು. ಸುತ್ತಮುತ್ತಲಿನ ಗ್ರಾಮಗಳಿಂದ ಸಾವಿರಾರು ಭಕ್ತರು ಆಗಮಿಸಿ ದೇವಿಗೆ ವಿಶೇಷ ನೈವೇದ್ಯವಾಗಿ ಹೋಳಿಗೆ ಸಮರ್ಪಿಸಿ, ದಾಸೋಹದಲ್ಲಿ ಪಾಲ್ಗೊಂಡರು.

ಜಾತ್ರೆಯ ಅಂಗವಾಗಿ ನೀಲಾಂಬಿಕಾ ನಾಟ್ಯ ಸಂಘದ ವತಿಯಿಂದ 'ಬರ್ಕೋ ಪದ ಬರ್ಕೋ' ಆಧ್ಯಾತ್ಮಿಕ ನಾಟಕ ಹಾಗೂ ಬುಧವಾರ ನಡೆಯುವ ಕಡುಬಿನ ಕಾಳಗದ ಸಂದರ್ಭದಲ್ಲಿ ಶ್ರೀ ಶಂಕರ ಸೇವಾ ನಾಟ್ಯ ಸಂಘದ ವತಿಯಿಂದ 'ಗೌರಿ ಗೆದ್ದಳು' ಸಾಮಾಜಿಕ ನಾಟಕ ಪ್ರದರ್ಶನಗೊಳ್ಳಲಿದೆ.



ನಾಟಕ, ಭಜನೆ ಹಾಗೂ ಕಲಾಮೇಳಗಳ ಮೂಲಕ ಜಾತ್ರೆಯು ಗ್ರಾಮೀಣ ಸೊಗಡು, ಕಲೆ–ಸಂಸ್ಕೃತಿ ಹಾಗೂ ಭಾವೈಕ್ಯತೆಯನ್ನು ಸಾರುವ ವೇದಿಕೆಯಾಗಿ ಗಮನ ಸೆಳೆಯುತ್ತಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka